PRGI NO : KNKAN/26/A0884

ಈ ನಮ್ಮ

# ಧೃತಿ ನ್ಯೂಸ್

E NAMMA DHURTHI NEWS KANNADA DAILY NEWS PAPER

ಸದೃಡತೆಯ ಹೆಜ್ಜೆಯೊಂದಿಗೆ..., ಕನ್ನಡ ದಿನಪತ್ರಿಕೆ

- ಕೊಪ್ಪಳ
- ವಿಜಯನಗರ
- ರಾಯಚೂರು
- ಬಳ್ಳಾರಿ
- ಗದಗ
- ಬಾಗಲಕೋಟೆ
- ಹಾವೇರಿ
- ಧಾರವಾಡ

ಸಂಪಾದಕರು: ಚಂದ್ರಕಾಂತ | ಸಂಪುಟ: 01 ಸಂಚಿಕೆ: 196 ಪುಟಗಳು: 04 ಬೆಲೆ: 02 ದಿನಾಂಕ: 20-09-2026 ಭಾನುವಾರ | email: enammadhruthinews@gmail.com | Pho : 7353595904

## ಜನರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸಿ : ಶಾಸಕ ಕೆ.ರಾಘವೇಂದ್ರ ಹಿಟ್ನಾಳ

ಧೃತಿ ನ್ಯೂಸ್ ಸುದಿ

ಸಾರ್ವಜನಿಕರ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ ಸ್ಥಳದಲ್ಲೇ ಇತ್ಯರ್ಥಪಡಿಸುವಂತೆ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಸಂಬಂಧಿಸಿದ ಅಧಿಕಾ-ರಿಗಳಿಗೆ ಸೂಚನೆ ನೀಡಿದರು.

ಪ್ರಜಾಸೇವಾ ಇಲಾಖೆ, ಕೊಪ್ಪಳ ಜಿಲ್ಲಾಡಳಿತ ಹಾಗೂ ತಾಲ್ಲೂಕು ಆಡಳಿತದ ಸಹಯೋಗದಲ್ಲಿ ತಾಲ್ಲೂಕಿನ ಹಿಟ್ನಾಳ ಗ್ರಾಮದ ಡಾ.ಬಿ.ಆರ್.ಅಂಬೇಡ್ಕರ ವಸತಿ ನಿಲಯದಲ್ಲಿ ಶನಿವಾರ (ಸೆ. 19ರಂದು) ಹಮ್ಮಿಕೊಂಡಿದ್ದ ಹೋಬಳಿ ಮಟ್ಟದ ಪ್ರಜಾಸೇವಾ ಆಂದೋಲನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಜನರು ಎದು-ರಿಸುತ್ತಿರುವ ಸಮಸ್ಯೆಗಳು ಸಾರ್ವಜನಿಕ ಹಿತಾಸಕ್ತಿಗೆ



ಸಂಬಂಧಿಸಿದ್ದಾಗಿದ್ದು, ಅವುಗಳನ್ನು ಆದ್ಯತೆಯ ಮೇರೆಗೆ ಬಗೆಹರಿಸುವುದು ಅಧಿಕಾರಿಗಳ ಮುಖ್ಯ ಜವಾಬ್ದಾ-ರಿಯಾಗಿದೆ. ಈ ಪ್ರಜಾಸೇವಾ ವೇದಿಕೆಯು ಸಾರ್ವಜನಿಕರು ಮತ್ತು ಆಡಳಿತದ ನಡುವೆ ನೇರ ಸಂಪರ್ಕ ಕಲ್ಪಿಸುವ ಉತ್ತಮ ಅವಕಾಶವಾಗಿದೆ. ಗ್ರಾಮಸ್ಥರು ವೈಯಕ್ತಿಕವಾಗಿ ತಮ್ಮ ಸಮಸ್ಯೆ ಹಾಗೂ ಅಹವಾಲುಗಳನ್ನು ಮುಕ್ತವಾಗಿ ಸಲ್ಲಿಸಬೇಕು ಎಂದು ತಿಳಿಸಿದರು.

ಪ್ರಜಾಸೇವಾ ಆಂದೋಲನ ಸಭೆಯಲ್ಲಿ ಸ್ಥಳೀಯವಾಗಿ ಇತ್ಯರ್ಥವಾಗುವ ಸಮಸ್ಯೆಗಳನ್ನು ತಕ್ಷಣವೇ ಪರಿಹರಿಸಲಾಗುವುದು. ತಾಲೂಕು ಅಥವಾ ಜಿಲ್ಲಾ ಮಟ್ಟದಲ್ಲಿ ಪರಿಹರಿಸಬೇಕಾದ ದೀರ್ಘಕಾಲೀನ ಬೇಡಿಕೆಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು ತ್ವರಿತವಾಗಿ ಬಗೆಹ-ರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಹಿಟ್ನಾಳ ಹಾಗೂ ಸುತ್ತಮುತ್ತಲಿನ ಗ್ರಾಮದ ಸಾರ್ವಜನಿಕರು ತಮ್ಮ ಕುಂದು ಕೊರತೆಗಳ ಅಹವಾಲುಗಳನ್ನು ಇದೇ ವೇಳೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕೊಪ್ಪಳ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಾಲಚಂದನ್, ತಹಶಿಲ್ದಾರರಾದ ಬಸವರಾಜ ತನ್ನಳ್ಳಿ, ತಾ.ಪಂ. ಇಓ ಗುಂಡಪ್ಪ ತುರಾದಿ ಸೇರಿದಂತೆ, ಜನಪ್ರತಿನಿಧಿಗಳು, ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಪಿಡಿಓ ಹಾಗೂ ಗ್ರಾ.ಪಂ ಸಿಬ್ಬಂದಿ ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

## ಚೇರಿ ಅಲೆದಾಟ ತಪ್ಪಿಸಲು 'ಪ್ರಜಾಸೇವಾ ಆಂದೋಲನ': ತಹಶಿಲ್ದಾರ ಪ್ರಕಾಶ ನಾಶಿ

ಧೃತಿ ನ್ಯೂಸ್ ಸುದಿ

ಸಾಮಾನ್ಯ ನಾಗರಿಕರು ಸಣ್ಣಪುಟ್ಟ ಕೆಲಸಗಳಿಗೂ, ಸರ್ಕಾರಿ ದಾಖಲೆಗಳಿಗೂ ತಾಲೂಕು ಅಥವಾ ಜಿಲ್ಲಾ ಮಟ್ಟದ ಸರ್ಕಾರಿ ಕಚೇರಿಗಳಿಗೆ ಪದೇಪದೇ ಅಲೆದಾಡುವುದನ್ನು ತಪ್ಪಿಸಲು ಸರ್ಕಾರವು 'ಪ್ರಜಾಸೇವಾ ಆಂದೋಲನ' ಜಾರಿಗೆ ತಂದಿದೆ ಎಂದು ತಹಶಿಲ್ದಾರರಾದ ಪ್ರಕಾಶ ನಾಶಿ ಅವರು ಹೇಳಿದರು.ಪ್ರಜಾಸೇವಾ ಇಲಾಖೆ ಹಾಗೂ ಯಲಬುರ್ಗಾ ತಾಲ್ಲೂಕು ಆಡಳಿತದ ಸಹಯೋಗದಲ್ಲಿ ಸಂಕನೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಶನಿವಾರ (ಸೆ. 19ರಂದು) ಹಮ್ಮಿಕೊಂಡಿದ್ದ ಹೊಬಳಿ ಮಟ್ಟದ ಪ್ರಜಾಸೇವಾ ಆಂದೋಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ ಎನ್ನುವ ಧ್ಯೆಯವಾಕ್ಯದೊಂದಿಗೆ ಪ್ರಜಾಸೇವಾ ಆಂದೋಲನವನ್ನು ಆಯೋಜಿಸಲಾಗುತ್ತಿದೆ. ಜನರ ಕುಂದು ಕೊರತೆಗಳನ್ನು ಸ್ಥಳೀಯ ಹಂತದಲ್ಲಿಯೇ ಬಗೆಹರಿಸಿಕೊಳ್ಳಲು ಸರ್ಕಾರ ಹಮ್ಮಿಕೊಂಡಿರುವ ಮಹತ್ವಾಕಾಂಕ್ಷಿ ಕಾರ್ಯಕ್ರಮ ಇದಾಗಿದೆ. ಜನರಿಂದ ಸಾಕಷ್ಟು ಅರ್ಜಿಗಳು ಬರುತ್ತಿರುವುದರಿಂದ ಅವರಿಗೆ ಅಧಿಕಾರಿಗಳು ಸರಿಯಾಗಿ ಸ್ಪಂದಿಸುತ್ತಿರುವುದರಿಂದ ಸ್ಥಳದಲ್ಲೆ ಅರ್ಜಿಗಳಿಗೆ ಪರಿಹಾರ ಲಭಿಸುವಂತಾಗಿದೆ. ಇದರಿಂದಾಗಿ ಸಾರ್ವಜನಿಕರು ಕಚೇರಿಗೆ ಅಲೆದಾಡುವುದು ತಪ್ಪಿಸಿದೆ ಎಂದು ತಿಳಿಸಿದರು.

ಯಲಬುರ್ಗಾ ತಾ.ಪಂ ಇಓ ನೀಲಗಂಗಾ ಬಬಲಾದ ಅವರು ಮಾತನಾಡಿ, ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ಉದ್ದೇಶದಿಂದ ಸರ್ಕಾರ ಜನರ ಅಹವಾಲಿಗೆ ತುರ್ತಾಗಿ ಸ್ಪಂದಿಸಲೆಂದೇ ಹೊಸದಾಗಿ ಪ್ರಜಾಸೇವೆ ಇಲಾಖೆ ರಚಿಸಿ, ಸರ್ಕಾರದ ಮಹತ್ವಾಕಾಂಕ್ಷೆಯ ಪ್ರಜಾಸೇವಾ ಆಂದೋಲನ ಸಭೆಗಳನ್ನು ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಅಭಿಯಾನದ ರೀತಿಯಲ್ಲಿ ನಡೆಯುವಂತೆ ವ್ಯವಸ್ಥೆ ಮಾಡಿದೆ. ಇದರ ಭಾಗವಾಗಿ ಸಂಕನೂರಿನಲ್ಲಿ ಪ್ರಜಾಸೇವಾ ಕಾರ್ಯಕ್ರಮ ನಡೆಯುತ್ತಿದೆ. ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಸಲ್ಲಿಸಿ, ಅದಕ್ಕೆ ಪರಿಹಾರ ಕಂಡುಕೊಳ್ಳಬೇಕು ಎಂದು ಹೇಳಿದರು.

ಇದೇ ವೇಳೆ ವಿವಿಧ ಇಲಾಖೆಯಿಂದ ಪ್ರಮಾಣ ಪತ್ರ ಹಾಗೂ ಇತರೆ ಸೌಲಭ್ಯಗಳನ್ನು ವಿತರಿಸಲಾಯಿತು. ಸಾರ್ವಜನಿಕರು ತಮ್ಮ ಕುಂದುಕೊರತೆಗಳ ಅರ್ಜಿಗಳನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ತಾ.ಪಂ ಸಹಾಯಕ ನಿರ್ದೇಶಕರಾದ ಹನಮಂತಗೌಡ ಪೊಲೀಸ್ ಪಾಟೀಲ್, ಫಕೀರಪ್ಪ ಕಟ್ಟಿಮನಿ ಹಾಗೂ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು, ಗ್ರಾ.ಪಂ ಪಿಡಿಓ ಹಾಗೂ ಸಿಬ್ಬಂದಿ ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

## ಸರ್ಕಾರಿ ಸೇವೆಗಳನ್ನು ತ್ವರಿತವಾಗಿ ಪಡೆಯಲು 'ಪ್ರಜಾಸೇವಾ ಆಂದೋಲನ' ಉತ್ತಮ ವೇದಿಕೆ : ತಹಸೀಲ್ದಾರ ಎಂ.ಕುಮಾರಸ್ವಾಮಿ

ಧೃತಿ ನ್ಯೂಸ್ ಸುದಿ

ಸರ್ಕಾರಿ ಸೇವೆಗಳನ್ನು ತ್ವರಿತವಾಗಿ ಪಡೆಯಲು ಪ್ರಜಾಸೇವಾ ಆಂದೋಲನ' ಸಭೆಯು ಉತ್ತಮ ವೇದಿಕೆಯಾಗಿದೆ ಎಂದು ಕಾರಟಗಿ ತಹಸೀಲ್ದಾರ ಎಂ.ಕುಮಾರಸ್ವಾಮಿ ಅವರು ಹೇಳಿದರು.ಪ್ರಜಾಸೇವಾ ಇಲಾಖೆ, ಕಾರಟಗಿ ತಾಲೂಕಾಡಳಿತ ಹಾಗೂ ಪುರಸಭೆ ಕಾರ್ಯಾಲಯ ಸಹಯೋಗದಲ್ಲಿ ಪಟ್ಟಣದ ಅಮ್ಮಮಹೇಶ್ವರಿ ಕಲ್ಯಾಣ ಮಂಟಪದಲ್ಲಿ ಶನಿವಾರ (ಸೆ. 19ರಂದು) ಆಯೋಜಿಸಲಾಗಿದ್ದ ಪ್ರಜಾಸೇವಾ ಆಂದೋಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ ಎಂಬಂತೆ, ಕರ್ನಾಟಕ ಸರ್ಕಾರ ನೂತನವಾಗಿ ಜಾರಿಗೆ ತಂದಿರುವ ಪ್ರಜಾಸೇವಾ ಆಂದೋಲನಾ ಸಭೆಯಿಂದ ಸಾರ್ವಜನಿಕರಿಗೆ ಅನುಕೂಲವಾಗಿದೆ. ಅಧಿಕಾರಿಗಳು ತಮ್ಮ ಇಲಾಖೆಗೆ ಸಂಬಂಧಿಸಿದ ಅಹವಾಲುಗಳಿಗೆ ನಿಯಮಾನುಸಾರ ಪರಿಶೀಲಿಸಿ ವಿಲೇವಾರಿ ಮಾಡಲು ಕ್ರಮವಹಿಸಬೇಕು ಎಂದರು. ಸಾರ್ವಜನಿಕರ ಬೇಡಿಕೆ, ದೂರುಗಳಿಗೆ



ತ್ವರಿತವಾಗಿ ಸ್ಪಂದಿಸಲು ಉದ್ದೇಶಿಸಲಾದ ರಾಜ್ಯ ಸರ್ಕಾರದ ಪ್ರಜಾ ಸೇವಾ ಆಂದೋಲವನ್ನು ಯಶಸ್ವಿಯಾಗಿ ಹಮ್ಮಿಕೊಳ್ಳಲು ತಾಲೂಕಾಡಳಿತವು ಬದ್ಧವಾಗಿದೆ ಎಂದು ಅವರು ಹೇಳಿದರು.

*ವಿವಿಧ ಇಲಾಖೆಗಳ ಕೌಂಟರ್:* ಸಾರ್ವಜನಿಕ-ರಿಗೆ ಅನುಕೂಲವಾಗಲೆಂದು ಕಲ್ಯಾಣ ಮಂಟಪದ ಆವರಣದ ಮುಂಭಾಗದಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಕೌಂಟರಗಳನ್ನು ತೆರೆದಿದ್ದು, ಸಾರ್ವಜನಿಕರು ತಮ್ಮ ಕುಂದು ಕೊರತೆಗಳ ಅರ್ಜಿಗಳನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಕಾರಟಗಿ ತಾ.ಪಂ ಇಓ ಲಕ್ಷ್ಮೀದೇವಿ ಯಾದವ್, ಪುರಸಭಾ ಮುಖ್ಯಾಧಿಕಾರಿ ಸಾಬಣ್ಣ ಕಟ್ಟೆಕಾರ್, ಉಪ ವಲಯ ಅಬಕಾರಿ ಉಪಾಧ್ಯಕ್ಷರಾದ ಆಂಜನೇಯ, ಅಬಕಾರಿ ನಿರೀಕ್ಷಕರಾದ ವಿಠ್ಠಲ ಪಿರಗಣ್ಣನವರು, ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಹನುಮಂತಪ್ಪ ನಾಯಕ ಸೇರಿದಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಉಪಾಧ್ಯಕ್ಷರು, ಸದಸ್ಯರು, ಕೆಡಿಪಿ ಸದಸ್ಯರು, ವಿವಿಧ ಇಲಾಖೆಗಳ ನಾಮನಿರ್ದೇಶಿತ ಸದಸ್ಯರು, ತಾಲೂಕು ಮಟ್ಟದ ಅಧಿಕಾರಿಗಳು, ಗ್ರಾಮ ಪಂಚಾಯತಿ ಅಭಿವೃದ್ಧಿ

ಕುಕನೂರು ಪಟ್ಟಣದ ಮತ್ತು ಹೋಬಳಿಯ ಎಲ್ಲಾ ಗ್ರಾಮಗಳ ಸಮಗ್ರ ಅಭಿವೃದ್ಧಿ ಹಾಗೂ ಸಾರ್ವಜನಿಕರ ಕುಂದುಕೊರತೆಗಳಿಗೆ ತ್ವರಿತವಾಗಿ ಸ್ಪಂದಿಸುವ ಹೊಣೆಗಾರಿಕೆ ಎಲ್ಲ ಇಲಾಖೆಗಳ ಮೇಲಿದೆ ಎಂದು ಕುಕನೂರು ತಹಶಿಲ್ದಾರರಾದ ಬಸವರಾಜ ಬೆಣ್ಣಿಶೀರೂರ ಅವರು ಹೇಳಿದರು.

ಪ್ರಜಾಸೇವಾ ಇಲಾಖೆ ಹಾಗೂ ಕುಕನೂರು ತಾಲ್ಲೂಕು ಆಡಳಿತದ ಸಹಯೋಗದಲ್ಲಿ ಕುಕನೂರಿನ ವಿದ್ಯಾನಂದ ಕಾಲೇಜು ಆವರಣದಲ್ಲಿ ಶನಿವಾರ (ಸೆ. 19ರಂದು) ಹಮ್ಮಿಕೊಂಡಿದ್ದ ಹೊಬಳಿ ಮಟ್ಟದ ಪ್ರಜಾಸೇವಾ ಆಂದೋಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ ಎಂಬ ಧ್ಯೇಯವಾಕ್ಯದೊಂದಿಗೆ ನಡೆಯುತ್ತಿರುವ

## ಹುಬ್ಬಳ್ಳಿಯಲ್ಲಿ ಗೃಹ ಸಚಿವ ಅಮಿತ್ ಶಾ ಆರೋಗ್ಯದಲ್ಲಿ ಏರುಪೇರು, ಕಾರ್ಯಕ್ರಮ ಮುಂದೂಡಿಕೆ



ಹುಬ್ಬಳ್ಳಿ : ಎರಡು ದಿನಗಳ ಕರ್ನಾಟಕ ಪ್ರವಾಸದ ಅಂಗವಾಗಿ ಹುಬ್ಬಳ್ಳಿಗೆ ಆಗಮಿಸಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಆರೋಗ್ಯದಲ್ಲಿ ಶನಿವಾರ ದಿಢೀರ್ ಏರುಪೇರು ಕಂಡುಬಂದಿದೆ. ಹುಬ್ಬಳ್ಳಿಯ ಖಾಸಗಿ ಹೋಟೆಲ್‌ನಲ್ಲಿ ತಂಗಿದ್ದ ವೇಳೆ ಅಸ್ವಸ್ಥಗೊಂಡ ಸಚಿವ-ರಿಗೆ ಅವರ ವೈದ್ಯಕೀಯ ತಂಡದ ಡಾ. ಅರುಣ್ ಪ್ರತಾಪ್ ನೇತೃತ್ವದ ವೈದ್ಯರ ತಂಡ ಹೋಟೆಲ್‌ನಲ್ಲೇ ತುರ್ತು ಚಿಕಿತ್ಸೆ ನೀಡಿದೆ. ಆರೋಗ್ಯದಲ್ಲಿ ವ್ಯತ್ಯಾಸವಾದ ಹಿನ್ನೆಲೆಯಲ್ಲಿ ವೈದ್ಯರು ಅಮಿತ್ ಶಾ ಅವರಿಗೆ ಕನಿಷ್ಠ 2 ಗಂಟೆಗಳ ಕಾಲ ಸಂಪೂರ್ಣ ವಿಶ್ರಾಂತಿ ಪಡೆಯುವಂತೆ ಸೂಚಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಹೋಟೆಲ್ ಸುತ್ತಮುತ್ತ ಭದ್ರತೆ ಹೆಚ್ಚಿಸಲಾಗಿದ್ದು, ಧಾರವಾಡ ಜಿಲ್ಲಾಧಿಕಾರಿ, ಜಿಪಂ ಸಿಇಒ ಭುವನೇಶ ಪಾಟೀಲ್ ಹಾಗೂ ಐಜಿಪಿ ಲಾಬುರಾಮ್ ಅವರು ಹೋಟೆಲ್‌ಗೆ ಭೇಟಿ ನೀಡಿ ಪರಿಸ್ಥಿತಿಯ ಮೇಲ್ವಿಚಾರಣೆ ನಡೆಸಿದ್ದಾರೆ.ಅಮಿತ್ ಶಾ ಅವರು ಶುಕ್ರವಾರ ತಡರಾತ್ರಿ ವಿಶೇಷ ವಿಮಾನದ ಮೂಲಕ ದೆಹಲಿಯಿಂದ ಹುಬ್ಬಳ್ಳಿಗೆ ಆಗಮಿಸಿದ್ದರು. ವಿಮಾನ ನಿಲ್ದಾಣದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಸಂಸದರಾದ ಬಸವರಾಜ ಬೊಮ್ಮಾಯಿ, ಜಗದೀಶ್ ಶೆಟ್ಟರ್ ಮತ್ತು ಶಾಸಕ ಮಹೇಶ್ ಟೆಂಗಿನಕಾಯಿ ಸೇರಿದಂತೆ ಹಲವು ಬಿಜೆಪಿ ಗಣ್ಯರು ಅವರನ್ನು ಆತ್ಮೀಯವಾಗಿ ಸ್ವಾಗತಿಸಿದ್ದರು.

ಪೂರ್ವನಿಗದಿತ ವೇಳಾಪಟ್ಟಿಯಂತೆ, ಶನಿವಾರ ಬೆಳಿಗ್ಗೆ ಹುಬ್ಬಳ್ಳಿಯ ಗಬ್ಬೂರು ಬಳಿ ಸುಮಾರು 50 ಎಕರೆ ಪ್ರದೇಶದಲ್ಲಿ 700 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾದ 'ಕೆ-ಎಲ್‌ಇ ಜಗದ್ಗುರು ಗಂಗಾಧರ ಮಹಾಸ್ವಾಮಿಗಳ ಮೂರುಸಾವಿರಮಠ ವೈದ್ಯಕೀಯ ಮಹಾವಿದ್ಯಾಲಯ' ಹಾಗೂ 1,200 ಹಾಸಿಗೆಗಳ ನೂತನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಅಮಿತ್ ಶಾ ಉದ್ಘಾಟಿಸಬೇಕಿತ್ತು.ಆದರೆ ಸಚಿವರ ಆರೋಗ್ಯದಲ್ಲಿ ವ್ಯತ್ಯಾಸ ಉಂಟಾದ ಕಾರಣ, ಈ ಕಾರ್ಯಕ್ರಮವನ್ನು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರ ನೇತೃತ್ವದಲ್ಲಿ ಮುಂದುವರಿಸಲಾಯಿತು.

ಮುಂದಿನ ಪಯಣ:ವೈದ್ಯರ ಸಲಹೆಯಂತೆ ಅಗತ್ಯ ವಿಶ್ರಾಂತಿ ಪಡೆದ ಬಳಿಕ, ಅಮಿತ್ ಶಾ ಅವರು ತಮ್ಮ ಹುಬ್ಬಳ್ಳಿ ಪ್ರವಾಸದ ಉಳಿದ ಭಾಗವನ್ನು ರದ್ದುಗೊಳಿಸಿ ನೇರವಾಗಿ ದೆಹಲಿಗೆ ಹಿಂತಿ-ರುಗುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

700 ಕೋಟಿ ವೆಚ್ಚದ ವೈದ್ಯಕೀಯ ಕ್ಯಾಂಪಸ್

ಕೆಎಲ್‌ಇಯ ನೂತನ ವೈದ್ಯಕೀಯ ಕ್ಯಾಂಪಸ್ ಸುಮಾರು 50 ಎಕರೆ ಪ್ರದೇಶದಲ್ಲಿ, ಅಂದಾಜು ?700 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಂಡಿದ್ದು, ಸುಮಾರು 1,200 ಹಾಸಿಗೆಗಳ ಆಸ್ಪತ್ರೆ ಇದರ ಪ್ರಮುಖ ಭಾಗವಾಗಿದೆ. ಉತ್ತರ ಕರ್ನಾಟಕದಲ್ಲಿ ವೈದ್ಯಕೀಯ ಶಿಕ್ಷಣ, ಚಿಕಿತ್ಸೆ, ಸಂಶೋಧನೆ ಮತ್ತು ತುರ್ತು ಆರೋಗ್ಯ ಸೇವೆಗಳ ಮೂಲಸೌಕರ್ಯವನ್ನು ವಿಸ್ತ-ರಿಸುವ ಉದ್ದೇಶದಿಂದ ಈ ಯೋಜನೆ ರೂಪಿಸಲಾಗಿದೆ.


ಕೆಎಲ್‌ಇಯ ಮಾಹಿತಿಯಂತೆ, ಆಸ್ಪತ್ರೆಯಲ್ಲಿ ವಿವಿಧ ಬಹು-ವಿಶೇಷತೆ ಮತ್ತು ಸೂಪರ್-ಸ್ಪೆಷಾಲಿಟಿ ಸೇವೆಗಳು ಲಭ್ಯವಿದ್ದು, ಬಡವರಿಗೆ ಉಚಿತ ಅಥ-'ವಾ ಸಬ್ಸಿಡಿ ಚಿಕಿತ್ಸೆಗೆ 300 ಹಾಸಿಗೆಗಳನ್ನು ಮೀಸಲಿಡಲಾಗಿದೆ ಎಂದು ಸಂಸ್ಥೆಯ ಚಾನ್ಸಲರ್ ಪ್ರಭಾಕರ ಕೋರೆ ತಿಳಿಸಿದ್ದಾರೆ. ಆಸ್ಪತ್ರೆಯ ಸೇವೆಗಳು ಜನವರಿ 1, 2025ರಿಂದ ಆರಂಭವಾಗಿದ್ದವು.

## ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸುವ ಹೊಣೆಗಾರಿಕೆ ಎಲ್ಲ ಇಲಾಖೆಗಳ ಮೇಲಿದೆ: ತಹಶಿಲ್ದಾರ

ಧೃತಿ ನ್ಯೂಸ್ ಸುದಿ

ಪ್ರಜಾಸೇವೆ ಆಂದೋಲನವು ಸಾರ್ವಜನಿಕರ ಸಮಸ್ಯೆಗಳಿಗೆ ಸರ್ಕಾರದ ವಿವಿಧ ಇಲಾಖೆಗಳ ಮೂಲಕ ತ್ವರಿತ ಪರಿಹಾರ ಒದಗಿಸುವ ಮಹತ್ವದ ವೇದಿಕೆಯಾಗಿದೆ. ಕುಕನೂರು ಹೋಬಳಿ ವ್ಯಾಪ್ತಿಯ ವಿವಿಧ ಗ್ರಾಮ ಪಂಚಾಯಿತಿಗಳ ಸಾರ್ವಜನಿಕರು ತಮ್ಮ ಸಮಸ್ಯೆಗಳು ಹಾಗೂ ಕುಂದುಕೊರತೆಗಳ ಕುರಿತು ಸಲ್ಲಿಸಿದ ಅರ್ಜಿಗಳಿಗೆ ಸಾಧ್ಯವಾದಷ್ಟು ಸ್ಥಳದಲ್ಲಿಯೇ ಪರಿಹಾರ ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಕುಕನೂರು ತಾ.ಪಂ ಇಓ ಬೆಟದಪ್ಪ ಮಾಳೆಕೊಪ್ಪ ಅವರು ಮಾತನಾಡಿ, ಸರ್ಕಾರ ಜಾರಿಗೆ ತಂದಿರುವ ಪ್ರಜಾಸೇವೆ ಆಂದೋಲನವನ್ನು ತಾಲೂಕು, ಹೋಬಳಿ ಹಾಗೂ ಗ್ರಾಮ ಪಂಚಾಯಿತಿ




ಮಟ್ಟದಲ್ಲಿ ಆಯೋಜಿಸಲಾಗುತ್ತಿದೆ. ಸಾರ್ವಜನಿಕರು ಸರ್ಕಾರದ ವಿವಿಧ ಸೌಲಭ್ಯಗಳನ್ನು ಸುಲಭವಾಗಿ ಪಡೆಯಲು ಹಾಗೂ ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಇದೊಂದು ಉತ್ತಮ ವೇದಿಕೆಯಾಗಿದೆ ಎಂದರು.ಈ ಆಂದೋಲನದಲ್ಲಿ ಸ್ವೀಕರಿಸುವ ಅರ್ಜಿಗಳನ್ನು ಐಪಿಜಿ-ಆರ್‌ಎಸ್ ಪೋರ್ಟಲ್‌ನಲ್ಲಿ ದಾಖಲಿಸಿ ಸಂಬಂಧಪಟ್ಟ ಇಲಾಖೆಗಳಿಗೆ ರವಾನಿಸಲಾಗುತ್ತದೆ. ಸ್ಥಳದಲ್ಲಿಯೇ ಪರಿಹರಿಸಬಹುದಾದ ಅರ್ಜಿಗಳಿಗೆ ತಕ್ಷಣ ಪರಿಹಾರ ಒದಗಿಸಲಾಗುತ್ತದೆ. ಸ್ಥಳದಲ್ಲಿಯೇ ಪರಿಹ-ರಿಸಲು ಸಾಧ್ಯವಾಗದ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ, ಸಂಬಂಧಪಟ್ಟ ಇಲಾಖೆಗಳ ಮೂಲಕ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು, ಪೊಲೀಸ್ ಇಲಾಖೆ, ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿಗಳು ಸೇ-ರಿದಂತೆ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಈ ನಮ್ಮ ಧೃತಿ ನ್ಯೂಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.
ಮೊ: 7353595904

## ಶಿಕ್ಷಣ ಸೇವಾ ರತ್ನ ಪ್ರಶಸ್ತಿಗೆ ವೈಷ್ಣವಿ ಕಶ್ಯಪ್ ಆಯ್ಕೆ

ಧೃತಿ ನ್ಯೂಸ್ ಸುದಿ

ಬೆಂಗಳೂರು: ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ಗಮನಾರ್ಹ ಸೇವೆ ಹಾಗೂ ಬದ್ಧತೆಯನ್ನು ಗುರುತಿಸಿ, ಬೆಂಗಳೂರಿನ ಉಪನ್ಯಾಸಕಿ ವೈಷ್ಣವಿ ಕಶ್ಯಪ್ ಅವರನ್ನು 2026ನೇ ಸಾಲಿನ ರಾಜ್ಯ ಮಟ್ಟದ 'ಶಿಕ್ಷಣ ಸೇವಾ ರತ್ನ' ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಕರ್ನಾಟಕ ಪ್ರೆಸ್ ಕ್ಲಬ್ ಈ ಆಯ್ಕೆಯನ್ನು ಪ್ರಕಟಿಸಿದ್ದು, ಕ್ಲಬ್‌ನ ರಾಜ್ಯ ಅಧ್ಯಕ್ಷ ಎಸ್. ರಾಮಸ್ವಾಮಿ ಹಾಗೂ ಪ್ರಧಾನ ಕಾರ್ಯದರ್ಶಿ ರಮೇಶ್ ಎಸ್.ಜಿ. ಅವರು ಪ್ರಶಸ್ತಿ ಆಯ್ಕೆಯನ್ನು ದೃಢಪಡಿಸಿದ್ದಾರೆ.



ವೈಷ್ಣವಿ ಕಶ್ಯಪ್ ಅವರ ಬೋಧನಾ ಕೌಶಲ್ಯ, ಆಡಳಿತ ನಿರ್ವಹಣೆ ಹಾಗೂ ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಸಮಗ್ರ ಕೊಡುಗೆಯನ್ನು ಪರಿಗಣಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ತಿಳಿಸಲಾಗಿದೆ.

ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ ಸ್ಮರಣಾರ್ಥ ಶಿಕ್ಷಕರ ದಿನಾಚರಣೆ ಸಂದರ್ಭದಲ್ಲಿ ನೀಡಲಾಗುವ ಈ ಗೌರವವನ್ನು ಸೆ.20ರಂದು ಬೆಂಗಳೂರಿನ ಸರ್ ಪುಟ್ಟಣ್ಣ ಚೆಟ್ಟಿ ಪುರಭವನ (ಟೌನ್ ಹಾಲ್) ದಲ್ಲಿ ನಡೆಯುವ ಸಮಾರಂಭದಲ್ಲಿ ಪ್ರದಾನ ಮಾಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಂದಿನ ವಾರದಲ್ಲಿ ರಾಜ್ಯಾದ್ಯಂತ ವ್ಯಾಪಕ ಮಳೆ ಸಾಧ್ಯತೆ

ಬೆಂಗಳೂರು: ಬಂಗಾಳಕೊಲ್ಲಿಯ ಅಂಡಮಾನ್ ದ್ವೀಪದ ಸಮೀಪದಲ್ಲಿ ವಾಯುಭಾರ ಕುಸಿತವಾಗುತ್ತಿದ್ದು, ರಾಜ್ಯದಲ್ಲಿ ಇನ್ನೊಂದು ವಾರ ಮಳೆಯ ಪ್ರಮಾಣಇಂದಿನಿಂದ ರಾಜ್ಯದ ದಕ್ಷಿಣ ಒಳನಾಡು, ಕರಾವಳಿ ಹಾಗೂ ಪೂರ್ವ ಭಾಗದ ಜಿಲ್ಲೆಗಳಲ್ಲಿ ಮಳೆಯಾಗುವ ಪ್ರಕಾರ ಮುಂದಿನ ವಾರದಲ್ಲಿ ರಾಜ್ಯಾದ್ಯಂತ ವ್ಯಾಪಕ ಪ್ರಮಾಣದ ಮಳೆಯಾಗುವ ಸಾಧ್ಯತೆಗಳಿವೆ. ನೈರುತ್ಯ ಮುಂಗಾರು ಮಾರುತಗಳ ಮರಳುವಿಕೆ ಪ್ರಕ್ರಿಯೆ ಆರಂಭವಾಗಿದ್ದು, ಈಶಾನ್ಯ ಹಿಂಗಾರು ಮಾರುತಗಳು ಆರಂಭವಾಗುವ ಈ ಪರ್ವ ಕಾಲದಲ್ಲಿ ಮಳೆ ಸಾಧಾರಣ ಪ್ರಕ್ರಿಯೆ ಆಗಿದೆ.

## ಎಲ್ಲಾ ರೀತಿಯ ಆರಾಧನಾ ಕ್ರಮಗಳನ್ನು ಗೌರವಿಸುತ್ತೇವೆ : ಮೋಹನ್ ಭಾಗವತ್

ಭೋಪಾಲ್: ಅಹಂಕಾರದಿಂದ ಕೂಡಿದ ವ್ಯಕ್ತಿಯು ತನ್ನ ಅಧಿಕಾರವೇ ಎಲ್ಲೆಡೆ ನಡೆಯುತ್ತದೆ ಮತ್ತು ಎಲ್ಲವೂ ತನ್ನ ಇಚ್ಛೆಯಂತೆಯೇ ಆಗಬೇಕು ಎಂದು ನಂಬುತ್ತಾನೆ. ಆದರೆ ವಾಸ್ತವವು ಅದಕ್ಕಿಂತ ಭಿನ್ನವಾಗಿರುತ್ತದೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಮುಖ್ಯಸ್ಥ ಮೋಹನ್ ಭಾಗವತ್ ಹೇಳಿದರು. ಉಜ್ಜಯಿನಿಯಲ್ಲಿ ಯುವಕರ ಸಭೆಯೊಂದನ್ನು ಉದ್ದೇಶಿಸಿ ಮಾತನಾಡಿದ ಅವರು, ಅಹಂಕಾರದ ವಿರುದ್ಧ ಎಚ್ಚರಿಕೆ ನೀಡಿದರು. ನೆರೆಯ ಇಂದೋರ್‌ನಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ 'ಛಾತ್ರೋನ್ ಕಿ ಗೂಂಜ್' (ವಿದ್ಯಾರ್ಥಿಗಳ ಧ್ವನಿ) ಕಾರ್ಯಕ್ರಮ ನಡೆಯುವುದಕ್ಕೆ ಒಂದು ದಿನ ಮುಂಚಿತವಾಗಿ ಅವರ ಈ ಹೇಳಿಕೆಗಳು ಬಂದಿವೆ.

ತಮ್ಮ ಭಾಷಣದಲ್ಲಿ ಭಾಗವತ್ ಅವರು ಗಾಂಧಿ ಅಥವಾ ಬೇರೆ ಯಾವುದೇ ರಾಜಕೀಯ ನಾಯಕರ ಹೆಸರನ್ನು ಪ್ರಸ್ತಾಪಿಸಲಿಲ್ಲ. ಆದಾಗ್ಯೂ, ಮಧ್ಯಪ್ರದೇಶವು ವಿರೋಧ ಪಕ್ಷದ ಪ್ರಮುಖ ಕಾರ್ಯಕ್ರಮವೊಂದಕ್ಕೆ ಸಜ್ಜಾಗುತ್ತಿರುವ ಸಂದರ್ಭದಲ್ಲಿಯೇ ಅವರ ಈ ಹೇಳಿಕೆಗಳು ಬಂದಿವೆ. ಎಲ್ಲವನ್ನೂ ನಿಯಂತ್ರಿಸಬಹುದು ಎಂಬ ನಂಬಿಕೆಯ ವಿರುದ್ಧ ಅವರು ನೀಡಿದ ಪುನರಾವರ್ತಿತ ಎಚ್ಚರಿಕೆಗಳು ಅವರ ಭಾಷಣಕ್ಕೆ ರಾಜಕೀಯ ಆಯಾಮ ನೀಡಿವೆ.

ಉಜ್ಜಯಿನಿಯಲ್ಲಿ ನಡೆದ ಯುವ ಧರ್ಮ ಸಂಸದ್‌ನಲ್ಲಿ ಪಾಲ್ಗೊಂಡಿರುವುದಕ್ಕೆ ಸಂತೋಷ ವ್ಯಕ್ತಪಡಿಸಿದ ಆರ್‌ಎಸ್‌ಎಸ್ ಮುಖ್ಯಸ್ಥರು, ಇಂದಿನ ಯುವ ಪೀಳಿಗೆಯು ಧರ್ಮದ (ಕರ್ತವ್ಯದ) ಬಗ್ಗೆ ಚರ್ಚಿಸುತ್ತಿರುವುದನ್ನು ನೋಡುವುದು ಆಶಾದಾಯಕವಾಗಿದೆ ಎಂದು ಹೇಳಿದರು. ಧರ್ಮವು ನಡವಳಿಕೆಯಲ್ಲಿರುತ್ತದೆ, ಉಪನ್ಯಾಸಗಳಲ್ಲಾಗಲಿ ಅಥವಾ ಪುಸ್ತಕಗಳಲ್ಲಾಗಲಿ ಅಲ್ಲ. ಪುಸ್ತಕಗಳಲ್ಲಿ ಅದು ಇದ್ದರೂ, ಅದು ನಮ್ಮ ಜ್ಞಾನಕ್ಕಾಗಿ ಮತ್ತು ನಮಗೆ ಸ್ಪಷ್ಟತೆಯನ್ನು ನೀಡಲು ಮಾತ್ರ ಎಂದು ಅವರು ಹೇಳಿದರು.

ಧಾರ್ಮಿಕ ಸಹಿಷ್ಣುತೆಯ ಧರ್ಮವನ್ನು ಪ್ರತಿಪಾದಿಸಿದ ಭಾಗವತ್, "ನಮ್ಮ ಸ್ವಭಾವಕ್ಕೆ ಅನುಗುಣವಾದ ಹಾಗೂ ನಮ್ಮ ಗುರು ಅಥ-'ವಾ ಸಂಪ್ರದಾಯದಿಂದ ನಮಗೆ ಲಭಿಸಿರುವ ಆರಾಧನಾ ವಿಧಾನದಲ್ಲಿ ನಾವು ದೃಢವಾಗಿರುತ್ತೇವೆ. ಇತರರ ಆರಾಧನಾ ವಿಧಾನಗಳನ್ನೂ ನಾವು ಅಷ್ಟೇ ಗೌರವಿಸುತ್ತೇವೆ ಮತ್ತು ಅವುಗಳನ್ನು ಒಳ್ಳೆಯದೆಂದೇ ಪರಿಗಣಿಸುತ್ತೇವೆ. ಆದರೆ ನಾವು ಮತಾಂತರಗೊಳ್ಳುವುದಿಲ್ಲ; ಬದಲಿಗೆ, ನಮ್ಮದೇ ಆದ ಆರಾಧನಾ ವಿಧಾನದಲ್ಲಿ ದೃಢವಾಗಿ ಮುಂದುವರಿಯುತ್ತೇವೆ" ಎಂದು ಹೇಳಿದರು.

ಈ ನಮ್ಮ ಧೃತಿ ನ್ಯೂಸ್
E NAMMA DHURTHI NEWS
KANNADA DAILY NEWS PAPER

# ಸೆ.29 ರಂದು ಉದ್ಘಾಟನೆಗೆ ಸಿದ್ದವಾದ 15 ಕಟ್ಟಡ ಕಾಮಗಾರಿಗಳ ಉದ್ಘಾಟನೆ : ಶಾಸಕ ಹೆಚ್.ಆರ್.ಗವಿಯಪ್ಪ

ಧೃತಿ ನ್ಯೂಸ್ ಸುದ್ದಿ

ಹೊಸಪೇಟೆ:. ಹೊಸಪೇಟೆ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿವಿಧ ಇಲಾಖೆಗಳ ವತಿಯಿಂದ ಕೈಗೊಂಡಿರುವ ಅಭಿವೃದ್ಧಿ ಕಾಮಗಾ-ರಿಗಳ ಪ್ರಗತಿ ಹಾಗೂ ಪೂರ್ಣಗೊಂಡಿರುವ ಯೋಜನೆಗಳ ಉದ್ಘಾಟನೆಗೆ ಸಿದ್ಧವಾಗಿರುವ ಎಲ್ಲ ಕಾಮಗಾರಿಗಳನ್ನು ಇದೇ ಸೆಪ್ಟೆಂಬರ್ 29 ರಂದು ಲೋಕಾರ್ಪಣೆಗೊಳ್ಳಲಿವೆ ಎಂದು ಶಾಸಕ ಹೆಚ್. ಆರ್.ಗವಿಯಪ್ಪ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ವಿವಿಧ ಇಲಾಖೆಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಉದ್ಘಾಟನಾ ಕಾರ್ಯಕ್ರಮದಲ್ಲಿ ಮುಜರಾಯಿ, ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಸ್.ಬಸವಂತಪ್ಪ ಭಾಗವಹಿಸುವರು. ನಗರದ ಅಂಬೇಡ್ಕರ್ ವೃತ್ತದ ಬಳಿ ಪ್ರವಾಸೋದ್ಯಮ ಇಲಾಖೆಯಿಂದ 5 ಕೋಟಿ ರೂ. ಧನಸಹಾಯದೊಂದಿಗೆ



ಕೃಷಿ ಪ್ರವಾಸಿ ಸೌಧ ಕಟ್ಟಡ ಕಾಮಗಾರಿ ಸಂಪೂರ್ಣಗೊಂಡಿದ್ದು, ಉದ್ಘಾಟನೆಗೆ ಸಿದ್ದವಾಗಿದೆ.

ಅದೇ ರೀತಿ ಶೈಕ್ಷಣಿಕ ಪ್ರವಾಸಿ ನಿವಾಸದ ಕಾಮಗಾರಿಯೂ ಪೂರ್ಣಗೊಂಡಿದ್ದು, ಪ್ರವಾಸೋದ್ಯಮ ಇಲಾಖೆಯಿಂದ 5 ಕೋಟಿ ರೂ. ಅನುದಾನದ ಯೋಜನೆಯು ಉದ್ಘಾಟನೆಗೆ ಸಿದ್ಧವಾಗಿದೆ ಎಂದರು. ಹಂಪಿಯ ಕನ್ನಡ ವಿಶ್ವವಿದ್ಯಾಲಯದ ಆಂತ-ರಿಕ ಮತ್ತು ಒಳಾಂಗಣ ಕ್ರೀಡಾಂಗಣ ಕಾಮಗಾ-ರಿಗಳು ಪೂರ್ಣಗೊಂಡಿದ್ದು, ಡಿಎಂ-ಎಫ್ ಅನುದಾನದಡಿಯಲ್ಲಿ 2 ಕೋಟಿ ರೂ. ಅನುದಾನ ಒದಗಿಸಲಾಗಿದೆ. ತರಕಾರಿ ಮಾರುಕಟ್ಟೆ ಯೋಜನೆಯೂ ಸಂಪೂರ್ಣಗೊಂಡಿದ್ದು, ಒಟ್ಟು 14 ಕೋಟಿ ವೆಚ್ಚವಾಗಿದೆ. ಇದರಲ್ಲಿ 12 ಕೋಟಿ ಹಾಗೂ ಡಿಎಂಎಫ್ ಅಡಿಯಲ್ಲಿ 2 ಕೋಟಿ ಅನುದಾನದಲ್ಲಿ ಕಾಮಗಾರಿ ಪೂರ್ಣಗೊಂಡಿದೆ. ನಗರ ಹಾಗೂ ಸುತ್ತಮುತ್ತ ಪೂರ್ಣಗೊಂಡಿರುವ ಹಲವು ಪ್ರಮುಖ ಯೋಜನೆಗಳಾದ ಘನತ್ಯಾಜ್ಯ ನಿರ್ವಹಣಾ ಸೌಲಭ್ಯಗಳು, ಮಹದೇವಪುರ ಮತ್ತು ಕಗ್ಗದಾಸಪುರದಲ್ಲಿ 10 ಕೋಟಿ ವೆಚ್ಚದಲ್ಲಿ 15ನೇ ಹಣಕಾಸು ಆಯೋಗದ ನಿಧಿಯಡಿ ನಿರ್ಮಿಸಲಾಗಿದೆ.

ಕಸಾಯಿಖಾನೆ ಸೌಲಭ್ಯ 9 ಕೋಟಿ ರೂ. ವೆಚ್ಚದಲ್ಲಿ ವಿಶೇಷಅನುದಾನದಡಿ ಪೂರ್ಣಗೊಂಡಿದೆ. ಕುಡಿಯುವ ನೀರು ಪೂರೈಕೆ ವ್ಯವಸ್ಥೆಯ ಪುನರ್ವಸತಿ ಹಾಗೂ ಮೇಲ್ದರ್ಜೆಗೇರಿಸುವಿಕೆ ಯೋಜನೆಯಡಿ ನೀರು ಸಂಸ್ಕರಣಾ ಘಟಕ ಸೇ-ರಿದಂತೆ ಹಾಲಿ ವ್ಯವಸ್ಥೆಯನ್ನು ಮೇಲ್ದರ್ಜೆಗೇ-ರಿಸುವ ಕಾಮಗಾರಿ 12 ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾಗಿದೆ. ಆರೋಗ್ಯ ಇಲಾಖೆಯಡಿ ಲಸಿಕೆ ಶೇಖರಣಾ ಕೊಠಡಿ ಹಾಗೂ ಜಿಲ್ಲಾ ಆಸ್ಪತ್ರೆಯಡಿ ರೂ. 65 ಲಕ್ಷ ವೆಚ್ಚದಲ್ಲಿ ಕಟ್ಟಡ ಕಾಮಗಾರಿ ಪೂರ್ಣಗೊಂಡಿದ್ದು, ಉದ್ಘಾಟನೆಗೆ ಸಿದ್ದವಾಗಿದೆ.

ರಾಜ್ಯ ಸರ್ಕಾರದ ಅನುದಾನದಲ್ಲಿ ಕ್ರಾಂತಿ ವಿಕಾಸ ಮಹದೇವಪುರ ಸಮೀಪ ಸುಮಾರು ರೂ. 5 ಕೋಟಿ ವೆಚ್ಚದಲ್ಲಿ ಮೆಟ್ರಿಕ್ ನಂತರದ ಬಾಲಕಿಂ-ಯರ ವಸತಿ ನಿಲಯ ಕಾಮಗಾರಿ ನಿರ್ಮಿಸಲಾಗಿದೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಎಂ.ಪಿ. ಪ್ರಕಾಶ್ ನಗರದಲ್ಲಿರುವ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಕ್ಕೆ 6 ಹೆಚ್ಚುವರಿ ಕೊಠಡಿಗಳನ್ನು ರೂ.68 ಲಕ್ಷ ರೂ. ವೆಚ್ಚದಲ್ಲಿ ಕೆಆರ್‌ಡಿಎಲ್ ಮೂಲಕ ನಿರ್ಮಿಸಲಾಗಿದೆ.

ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ (ಹಂತ-2) ಅಡಿಯಲ್ಲಿ ತರಗತಿ ಕೊಠಡಿಗಳು, ಸಿಸಿ ರಸ್ತೆ ಹಾಗೂ ವಸತಿ ನಿಲಯಗಳ ನಿರ್ಮಾಣ-ಕ್ಕೆ ರೂ.9.56 ಕೋಟಿ ರೂ. ವೆಚ್ಚವಾಗಿದೆ.

ಕಾಮಗಾರಿಯನ್ನು ಕರ್ನಾಟಕ ಗೃಹಮಂಡಳಿ ಮೂಲಕ ಕೈಗೊಳ್ಳಲಾಗಿದೆ. ಪೊಲೀಸ್ ಇಲಾಖೆಯಡಿ 34 ಮಾದರಿಯ ಪೊಲೀಸ್ ವಸತಿ ಗೃಹಗಳು ನಿರ್ಮಾಣಗೊಂಡಿದ್ದು, ಸುಮಾರು ರೂ.10 ಕೋಟಿ ರೂ. ವೆಚ್ಚವಾಗಿದೆ.

ಕಾಮಗಾರಿಯನ್ನು ಕರ್ನಾಟಕ ರಾಜ್ಯ ಪೊಲೀಸ್ ವಸತಿ ನಿಗಮ ಮೂಲಕ ಕೈಗೊಳ್ಳಲಾಗಿದೆ.

ಸಣ್ಣ ನೀರಾವರಿ ಕಾಮಗಾರಿಗಳು, ಗ್ರಾಮೀಣ ಪ್ರದೇಶಗಳ ಸಿಸಿ ರಸ್ತೆ, ಚರಂಡಿ ಹಾಗೂ ವಿವಿಧ ಕಟ್ಟಡ ಕಾಮಗಾರಿಗಳ ಪ್ರಗತಿಯನ್ನೂ ಪರಿಶಿಸಿ ಬಾಕಿ ಇರುವ ಕಾಮಗಾರಿಗಳನ್ನು ತ್ವ-ರಿತವಾಗಿ ಪೂರ್ಣಗೊಳಿಸುವುದು ಹಾಗೂ ಪೂರ್ಣಗೊಂಡ ಕಾಮಗಾರಿಗಳ ಗುಣಮಟ್ಟವನ್ನು ಪರಿಶೀಲಿಸಿ ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸುವ ಕುರಿತು ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಇದ್ದರು.

## ಪೂಜ್ಯ ಪುಟ್ಟರಾಜ 16ನೇ ಪುಣ್ಯ ಸ್ಮರಣೋತ್ಸವ ಗವಾಯಿಗಳು ನಾಡಿಗೆ ಅನೇಕ ಕಲಾವಿದರನ್ನು

ಧೃತಿ ನ್ಯೂಸ್ ಸುದ್ದಿ

ಗದಗ : ಮಕ್ಕಳ ವ್ಯಕ್ತಿತ್ವ ನಿರ್ಮಾಣದಲ್ಲಿ ತಾಯಿ ಹಾಗೂ ಗುರುವಿನ ಪಾತ್ರ ಮಹತ್ತರವಾದದ್ದು ಗದಗ ಮುಕ್ಕಣ್ಣೇಶ್ವರ ಮಠದ ಶಂಕರಾ ನಂದ ಮಹಾಸ್ವಾಮಿಗಳು ಹೇಳಿದರು. ನಗರದ ಗಾನ ಗಂಧರ್ವ ಕಲಾ ಟ್ರಸ್ಟ್ ನಾದಶ್ರೀ ಸಂಗೀತ ಪಾಠಶಾಲೆ ಆವರಣದಲ್ಲಿ ಆಚರಿಸಿದ ಪರಮ ಪೂಜ್ಯ ಲಿಂಗಕ್ಯೆ ಪಂಡಿತ್ ಪುಟ್ಟರಾಜ ಗವಾಯಿಗಳವರ 16ನೇ ಪುಣ್ಯ ಸ್ಮರಣೋತ್ಸವ ನಾದಶ್ರೀ ಸಂಗೀತ ಪಾಠಶಾಲೆ ಮೂರನೇ ವಾರ್ಷಿಕೋತ್ಸವ ಹಾಗೂ ಪುಟ್ಟರಾಜ ಪುರಸ್ಕಾರ ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡುತ್ತಾ




ಪೂಜ್ಯ ಪುಟ್ಟರಾಜ ಗವಾಯಿಗಳು ನಾಡಿಗೆ ಅನೇಕ ಕಲಾವಿದರನ್ನು ನೀಡಿ ಅವರ ಬಾಳಿಗೆ ಬೆಳಕಾಗಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ ಬಸವರಾಜ್ ಬಳ್ಳಾರಿ ಯವರು ಮಕ್ಕಳಲ್ಲಿ ಸದಾಭಿರುಚಿ ಬೆಳೆಯಲು ಕಾರಣವಾಗುವ ಸಂಗೀತ ಶಿಕ್ಷಣವನ್ನು ನೀಡುತ್ತಿರುವ ಗಾನಗಂಧರ್ವ ಕಲಾ ಟ್ರಸ್ಟ್ ಕಾರ್ಯ ಶ್ಲಾಘನಿಯ ಎಂದು ಹೇಳಿದರು.

ಶ್ರೀ ಗುರು ಪುಟ್ಟರಾಜ ಪುರಸ್ಕಾರ ಶಿಕ್ಷಣ ಗೌರವ ಪ್ರಶಸ್ತಿಗೆ ಭಾಜನರಾದ ಜಯದೇವಿ ಏಕವಲ್ಲೂರ್ ತಮ್ಮ ನುಡಿ ನಮನದಲ್ಲಿ ಮಕ್ಕಳ ಸಕಾರಾತ್ಮಕ ವ್ಯಕ್ತಿತ್ವಕ್ಕೆ ಪೋಷಕರ ನಡವಳಿಕೆ ಅತ್ಯಂತ ಪ್ರಭಾವಶಾಲಿಯಾಗಿದ್ದು ಪೋಷಕರು ಪ್ರತಿದಿನ ಕನಿಷ್ಠ ಅರ್ಧ ಗಂಟೆಯಾದರೂ ಮಕ್ಕಳ ಜೊತೆ ಬೆರೆಯಬೇಕು ಮಕ್ಕಳ ಎದುರಲ್ಲೇ ಜಗಳವಾಡಬಾರದು ಶಿಕ್ಷಕರ ಬಗ್ಗೆ ಕೀಳಾಗಿ ಮಾತನಾಡಬಾರದು ಎಂದು ಕಿವಿಮಾತು ಹೇಳಿದರು.

ಮುಖ್ಯ ಅತಿಥಿ ಮೂತ್ರ ರೋಗ ತಜ್ಞ ಡಾ ಪ್ರವೀಣ ಡಂಬಳ ರವರು ದೇಹ ದಾನಂ ಮಹತ್ವವನ್ನು ತಿಳಿಸಿದರು. ಭಾರತೀಯ ಕೌಶಲ್ಯ ಕಲೆ ಮೆಚ್ಚಿ ಮಲೇಷಿಯಾದ ಉಗಾಂಡ ವಿಶ್ವವಿದ್ಯಾಲಯ ಡಾ" ಪದವಿ ಪೂರ್ವ ಪ್ರಸಾದ ಸೇವೆಯ ಸಿದ್ದರಾಮಯ್ಯ ಬಸವರಾಜ್ ಅಂಗಡಿ ಟ್ರಸ್ಟಿಗೆ ಹಾರ್ಮೋನಿಯಂ ಕಾಣಿಕೆ ಗಂಗಣ್ಣ ಬಿ ಮಲ್ಲಾಡದವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು.ಭಾಗ್ಯ ಶೇಖರಯ್ಯ ವಿಭೂತಿಯವರು ಮನಮೋಹಕ ಬಾನ್ಸೂರೀ ವಾದನ, ಡಾ.ಹನುಮಂತ ಬಿ ಹೂಗಾರ್ ತಬಲಾ ಸಾತ್ ಹಾಗೂ ನಾದಶ್ರೀ ಸಂಗೀತ ಪಾಠಶಾಲೆಯ ಮಕ್ಕಳ ವಚನ ಗಾಯನವನ್ನು ಅಕ್ಷಯ್ ಹೂಗಾರ್ ತಬಲ ಸಾತ್ ಮತ್ತು ಭರತನಾಟ್ಯ ಮೆಚ್ಚುಗೆ ಪಡೆದವು. ಸಿದ್ದಲಿಂಗಯ್ಯ ಶಾಸ್ತ್ರಿ ಗಡ್ಡದ ಮಠ ಸ್ವಾಗತಿಸಿದರು. ಶಿವಯೋಗಿ ಗಡ್ಡದಮಠ ನಿರೂಪಿಸಿದರರು. ಶಿವಬಸಯ್ಯ ಗಡ್ಡದಮಠ ವಂದಿಸಿದರು.

## ಶ್ರೀಮತಿ ವೈಶಾಲಿ ಎಂ.ಎಲ್ ವಾ.ಕ.ರ.ಸಾ.ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾಗಿ ಅಧಿಕಾರ ಸ್ವೀಕಾರ



ಧೃತಿ ನ್ಯೂಸ್ ಸುದ್ದಿ

ಗದಗ: ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ನೂತನ ವ್ಯವಸ್ಥಾಪಕ ನಿರ್ದೇಶಕರಾಗಿ ವೈಶಾಲಿ ಎಂ.ಎಲ್. ಅವರು ಅಧಿಕಾರ ವಹಿಸಿಕೊಂಡಿದ್ದಾರೆ. ವೈಶಾಲಿ ಎಂ.ಎಲ್. ಅವರು 2013ನೇ ಕರ್ನಾಟಕ ಬ್ಯಾಚ್ನ ಭಾರತೀಯ ಆಡಳಿತ ಸೇವೆಯ ಅಧಿಕಾರಿಯಾಗಿದ್ದು, ಪ್ರಸ್ತುತ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ದ ವ್ಯವಸ್ಥಾಪಕ ನಿರ್ದೇಶಕರಾಗಿ ಕೂಡ ಸೇವೆ ಸಲ್ಲಿಸುತ್ತಿದ್ದಾರೆ. ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾಗಿ ಅಧಿಕಾರ ವಹಿಸಿಕೊಂಡಿರುವ ಅವರು ಸಂಸ್ಥೆಯ ಹಿರಿಯ ಅಧಿಕಾ-ರಿಗಳೊಂದಿಗೆ ಸಭೆ ಜರುಗಿಸಿ ಸಾರಿಗೆ ಸಂಸ್ಥೆಯ ಕಾರ್ಯಾಚರಣೆ, ಸಾರ್ವಜನಿಕ ಸಾರಿಗೆ ಸೇವೆಗಳ ಸುಧಾರಣೆ ಹಾಗೂ ಪ್ರಯಾಣಿಕ-ರಿಗೆ ಉತ್ತಮ ಗುಣಮಟ್ಟದ ಸೇವೆ ಒದಗಿಸುವ ನಿಟ್ಟಿನಲ್ಲಿ ಸಂಸ್ಥೆಯ ಶ್ರೇಯಾಭಿವೃದ್ಧಿಗಾಗಿ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಲು ತಿಳಿಸಿದರು.

# ಮಕ್ಕಳ ಬೆಳವಣಿಗೆ ಎಲ್ಲರ ಜವಾಬ್ದಾರಿ: ಮಣ್ಣೂರ

ಧೃತಿ ನ್ಯೂಸ್ ಸುದ್ದಿ

ಗದಗ: ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆಯುಷ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನೆ, ಗದಗ ಇವರ ಸಂಂ-ಮುಕ್ತಾಶ್ರಯದಲ್ಲಿ ಮಂಜುನಾಥ ನಗರದಲ್ಲಿರುವ ನಗರಸಭೆ ಸಭಾಭವನ ಬೆಟಗೇರಿ ಪೋಷಣ ಮಾಸಾಚರಣೆ ಕಾರ್ಯಕ್ರಮ ಜರುಗಿತು.

9ನೇ ರಾಷ್ಟ್ರೀಯ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ದೀಪ ಬೆಳಗುವುದರೊಂದಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ರಾಧಾ ಮಣ್ಣೂರ ಉದ್ಘಾಟಿಸಿ ಮಾತನಾಡಿ, ಪೋಷಣ ಮಾಸಾಚರಣೆ ಕಾರ್ಯಕ್ರಮವು ಪ್ರತಿ ವರ್ಷದಂತೆ ಈ ವರ್ಷವೂ ಕೂಡಾ ಇಲಾಖೆಯಿಂದ ಜಿಲ್ಲೆಯಾದ್ಯಂತ ಎಲ್ಲ ಅಂಗನವಾಡಿ ಕೇಂದ್ರಗಳಲ್ಲಿ ಆಚರಿಸಲಾಗುತ್ತಿದ್ದು ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಎತ್ತರ ತೂಕವನ್ನು ಅಳೆಯುವ ಮೂಲಕ ಮಕ್ಕಳ ಬೆಳವಣಿಗೆಯ ಮಟ್ಟವನ್ನು ಗುರುತಿಸಿ ಸೂಕ್ತ ಚಿಕಿತ್ಸೆಗೆ ಎನ್ ಆರ್ ಸಿ ಕೇಂದ್ರಗಳಿಗೆ ಶಿಫಾರಸ್ಸು ಮಾಡಲಾಗುತ್ತಿದೆ. ಪಾಲಕರು ಸಹ ತಮ್ಮ ಮೊಬೈಲನಲ್ಲಿ ಪೋಷಣ ಕ್ಯಾಲ್ಕುಲೇಟ-ರ್ ಬಳಸಿಕೊಂಡು ಸದರಿ ಮಕ್ಕಳ ಬೆಳವಣಿಗೆ



ಮಟ್ಟವನ್ನು ಗುರುತಿಸಬಹುದು, ಇದು ಎಲ್ಲರ ಜವಾಬ್ದಾರಿಯಾಗಿದೆ. ಈ ಸಾಲಿನ ಪೋಷಣ ಮಾಸಾಚರಣೆಯ ಘೋಷ ವಾಕ್ಯವೂ ಸಹ "ಹಮಾರಿ ಅಂಗನವಾಡಿ, ಹಮಾರಿ ಜಿಮ್ಮೆದಾರಿ" (ನಮ್ಮ ಅಂಗನವಾಡಿ, ನಮ್ಮ ಜವಾಬ್ದಾರಿ) ಎಂಬುದಾಗಿದೆ ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ಪೂರಕ ಪೌಷ್ಠಿಕ ಆಹಾರ ವಿತರಣಾ ವೇಳಾ ಪಟ್ಟಿಯನ್ನು ಇಲಾಖೆಯಿಂದ ನವೀಕರಿಸಲಾಗಿದೆ.

ಅದರ ಪ್ರಾತ್ಯಕ್ಷಿಕೆಯನ್ನು ಕೂಡಾ ಈ ಕಾರ್ಯಕ್ರಮದಲ್ಲಿ ಆಯೋಜಿಸಿದೆ ಇದನ್ನು ವೀಕ್ಷಿಸಿ ಅರ್ಹ ಫಲಾನುಭವಿಗಳು ಇದರ ಸದುಪಯೋಗವನ್ನು ಅಂಗನವಾಡಿ ಕೇಂದ್ರಗಳ ಮೂಲಕ ಪಡೆಯಿರಿ ಎಂದು ಸಲಹೆ ನೀಡಿದರು. ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಂಜುಳಾ ಕಮತ್ ಪ್ರಾಸ್ತಾವಿಕವಾಗಿ ಮಾತನಾಡಿ, 2026-27 ನೇ ಸಾಲಿನ ಪೋಷಣ ಮಾಸಾಚರಣೆಯ ಘೋಷ ವಾಕ್ಯ "ನಮ್ಮ ಅಂಗನವಾಡಿ ನಮ್ಮ ಜವಾಬ್ದಾರಿ" ಎಂಬುದಾಗಿದ್ದು ಅಂ-ದರೆ ಅಂಗನವಾಡಿ ಕೇಂದ್ರಗಳ ಅಭಿವೃದ್ಧಿ ಮತ್ತು ನಿರ್ವಹಣೆ ಕೇವಲ ಸರ್ಕಾರದ ಜವಾಬ್ದಾರಿ ಅಲ್ಲ ಇಡೀ ಸಮುದಾಯದ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಪಂಚಗ್ಯಾರಂಟಿ ಸದಸ್ಯರಾದ ಸಂಗಮೇಶ ಹಾದಿಮನಿ ಮಾತನಾಡಿ, ಈ ಕಾರ್ಯಕ್ರಮವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯವರು ತುಂಬಾ ಅಚ್ಚುಕಟ್ಟಾಗಿ ಆಯೋಜಿಸಿರುತ್ತಾರೆ, ಇದರ ಸದುಪಯೋಗ ಸಮುದಾಯದ ಜನರು ಪಡೆಯಬೇಕು ಎಂದರು. ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೇಣುಕಾ ಮಾಗಡಿ ಮಾತನಾಡಿ, ಗರ್ಭಿಣಿ, ಬಾಣಂತಿ ಹಾಗೂ ಮಕ್ಕಳ ದಿನನಿತ್ಯದ ಆಹಾರವು ಪೌಷ್ಠಿಕಾಂಶದಿಂದ ಕೂಡಿರಬೇಕು ಹಾಗೂ ಮಕ್ಕಳ ಶಾರೀರಿಕ ಮತ್ತು ಮಾನಸಿಕ ಬೆಳವಣಿಗೆಗೆ ಪೌಷ್ಠಿಕ ಆಹಾರವು ಪ್ರಮುಖವಾಗಿದೆ ಎಂಬುದರ ಬಗ್ಗೆ ವಿವರವಾಗಿ ಮಾತನಾಡಿದರು.

ಹೊಳಬಸಪ್ಪ ಅಕ್ಕಿ ಮಾತನಾಡಿ, ಇಲಾಖೆಯ ಕಾರ್ಯಕ್ರಮಗಳು ಜನ-ರಿಗೆ ತಲುಪುವಂತಿವೆ. ಆದ್ದರಿಂದ ತಮ್ಮ ಇಲಾಖೆಯಿಂದ ಕಾರ್ಯಕ್ರಮಗಳನ್ನು ಆಯೋಜಿಸಲು ಈ ನಗರಸಭೆ ಸಮುದಾಯ ಭವನವನ್ನು ಉಚಿತವಾಗಿ ಬಳಸಿಕೊಳ್ಳಿ ಎಂದು ಸಲಹೆ ನೀಡಿದರು. ಬೂದಪ್ಪ ಹುಣಸಿಮರದ ಅತಿಥಿಗಳಾಗಿ ಭಾಗವಹಿಸಿದ್ದರು. ಅಧ್ಯಕ್ಷತೆ ವಹಿಸಿದ್ದ ಶಕುಂತಲಾ ಅಕ್ಕಿ ಮಾತನಾಡಿ, 2026ರ ಸೆಪ್ಟೆಂಬರ ಮಾಹೆಯಲ್ಲಿ ಆಚರಿಸಲಾಗುತ್ತಿರುವ ಪೋಷಣ ಮಾಸಾಚರಣೆ ಕಾರ್ಯಕ್ರಮ "ನಮ್ಮ ಅಂಗನವಾಡಿ ನಮ್ಮ ಜವಾಬ್ದಾರಿ" ಎಂಬ ಘೋಷ ವಾಕ್ಯದೊಂದಿಗೆ ಆಚರಿಸಲಾಗುತ್ತಿದ್ದು ಇದು ಕೇವಲ ಅಂಗನವಾಡಿ ಕಾರ್ಯಕರ್ತೆಯರ ಜವಾಬ್ದಾ-ರಿಯಾಗಿರದೇ ಇಡೀ ಸಮಾಜದ ಜವಾಬ್ದಾ-ರಿಯಾಗಿದೆ. ಸಾರ್ವಜನಿಕರ ಸಹಭಾಗಿತ್ವ ದೇಶವನ್ನು ಸದೃಢವಾಗಿಸಲು ಈ ಜವಾಬ್ದಾರಿ ತುಂಬಾ ಅವಶ್ಯಕವಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸುಜಾತಾ ಹಾವನೂರ, ಪವನ ಕಾಟೀಗರ ಕಾವೇರಿ ಚೇಗೂರ, ಆಶಾ ಕಾರ್ಯಕರ್ತೆಯರು ಅಂಗನವಾಡಿ ಕಾರ್ಯಕರ್ತೆ-ಸಹಾಯಕಿಯರು, ಸಾರ್ವಜನಿಕರು, ಗರ್ಭಿಣಿ, ಬಾಣಂತಿಯರು ಹಾಗೂ ಮುದ್ದು ಮಕ್ಕಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಮಂಗಳೂರು ಮೀನು ಮಾರುಕಟ್ಟೆಗೆ ಭೇಟಿ ನೀಡಿ ಮೀನುಗಾರರ ಕಷ್ಟ ಕೇಳಿದ ಸಿಎಂ ಡಿಕೆಶಿ



ಧೃತಿ ನ್ಯೂಸ್ ಸುದ್ದಿ

ಮಂಗಳೂರು: ಸಚಿವ ಸಂಪುಟಸಭೆಯ ಹಿನ್ನೆಲೆಯಲ್ಲಿ ಮಂಗಳೂರು ಪ್ರವಾಸದಲ್ಲಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಮುಂಜಾನೆ ಮೀನು ಮಾರುಕಟ್ಟೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಲ್ಲದೇ ಮೀನುಗಾರರ ಜೊತೆ ಸಮಾಲೋಚನೆ ನಡೆಸಿದರು. ಮುಖ್ಯಮಂತ್ರಿಯವರ ದಿಢೀರ್ ಭೇಟಿ ಹಿನ್ನೆಲೆಯಲ್ಲಿ ಭದ್ರತಾ ದೃಷ್ಟಿಯಿಂದ ಅಧಿಕಾರಿಗಳು ಮೀನು ಮಾರುಕಟ್ಟೆಯ ಚಟುವಟಿಕೆಗಳನ್ನು ಸ್ಥಗಿತ ಗೊಳಿಸಿದ್ದರು. ಮುಖ್ಯಮಂತ್ರಿಯವರು ಇದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಸ್ಥಳೀಯರ ಜೊತೆ ಚರ್ಚೆ ನಡೆಸಿದ ಬಳಿಕ ಅರಬ್ಬೀ ಸಮುದ್ರದಲ್ಲಿ ಪ್ರಯಾಣಿಸಿ ಮೀನುಗಾರರ ಕಷ್ಟ-ನಷ್ಟಗಳನ್ನು ಆಲಿಸಿದರು. ಇದೇ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಂದೆ ತಾವು ಕಾಂಗ್ರೆಸ್ ಅಧ್ಯಕ್ಷನಾಗಿದ್ದಾಗ ಮೀನುಗಾರರು ಮತ್ತು ಮಾರಾಟಗಾರರ ಜೊತೆ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸಿದ್ದೆ. ಮೀನುಗಾರರ ಸಂಘದವರು ಈಗ ತಮನ್ನು ಭೇಟಿ ಮಾಡಿ ಹಲವು ಬೇಡಿಕೆಗಳನ್ನು ಮಂಡಿಸಿದ್ದಾರೆ. ಹೀಗಾಗಿಯೇ ಇಂದು ಬೆಳಗ್ಗೆ ಖುದ್ದಾಗಿ ಸಮಸ್ಯೆ ತಿಳಿದುಕೊಳ್ಳಲು ಬೆಳಗ್ಗೆ 5 ಗಂಟೆಗೆ ಆಗಮಿಸಿದ್ದೇನೆ ಎಂದರು.ನಾನು ಇಲ್ಲಿಗೆ ಭೇಟಿ ನೀಡುವ ವೇಳೆಯಲ್ಲಿ ಮಾರುಕಟ್ಟೆಯ ಚಟುವಟಿಕೆಗಳನ್ನು ನಿಲ್ಲಿಸಲಾಗಿದೆ. ಇದು ತಮಗೆ ಸಮಾಧಾನ ತಂದಿಲ್ಲ. ಚಟುವಟಿಕೆ ನಿಲ್ಲಿಸಲು ಅಧಿಕಾರಿಗಳು ಅಥವಾ ಪೊಲೀಸರು ಕಾರಣ ಇರಬಹುದು. ಈ ಬಗ್ಗೆ ತನಿಖೆ ಮಾಡಿ ವರದಿ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದೇನೆ. ಒಂದು ವೇಳೆ ಅಧಿಕಾರಿಗಳ ಪಾತ್ರ ಇದ್ದರೆ, ಈ ದಿನವೇ ಅಮಾನತುಗೊಳಿಸಲು ಆದೇಶಿಸುತ್ತೇನೆ ಎಂದರು.

ಮೀನುಗಾರಿಕೆಯ ವ್ಯವಹಾರ ಬಹು ಮುಖ್ಯವಾಗಿದೆ. ದೇಶ ವಿದೇಶಗಳಿಂದಲೂ ಜನ ಬರುತ್ತಾರೆ. ಒಂದು ಗಂಟೆ ವ್ಯವಹಾರ ನಿಂತರೆ ಸಾಕಷ್ಟು ನಷ್ಟವಾಗುತ್ತದೆ ಮತ್ತು ಜನರಿಗೂ ತೊಂದರೆಯಾಗುತ್ತದೆ. ಮುಖ್ಯಮಂತ್ರಿಯವರ ಭದ್ರತೆ ಎಂಬ ಕಾರಣಕ್ಕೆ ವ್ಯವಹಾರ ನಿಲ್ಲಿಸಿರುವುದು ಸರಿಯಲ್ಲ ಎಂದರು.ಈ ಭಾಗದಲ್ಲಿ ಕೆಲವರು ಅನಧಿಕೃತವಾಗಿ ಗೋಡೆ ಕಟ್ಟಿ ಸಂಚಾರಕ್ಕೆ ಅಡ್ಡಿಪಡಿಸಿದ್ದಾರೆ, ಅನುಮತಿ ಇಲ್ಲದೆ ಕಾಂಪೌಂಡ್ ಹಾಕಿದ್ದಾರೆ ಎಂಬುದು ನನ್ನ ಗಮನಕ್ಕೆ ಬಂದಿದೆ. ಯಾರು ಎಷ್ಟೇ ದೊಡ್ಡವರಾಗಿದ್ದರೂ ಮುಲಾಜು ಇಲ್ಲದೆ ಕ್ರಮ ಕೈಗೊಂಡು, ಒತ್ತುವರಿ ತೆರವು ಮಾಡಿ ಸರ್ಕಾರಿ ಆಸ್ತಿಗಳನ್ನು ವಶಕ್ಕೆ ತೆಗೆದುಕೊಳ್ಳಬೇಕು. ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದೇನೆ. ಖಾಸಗಿ ಆಸ್ತಿಗಳಾಗಿದ್ದರೆ ಅವುಗಳ ಸ್ವಾಧೀನಕ್ಕೆ ಕ್ರಮ ಕೈಗೊಳ್ಳಬೇಕು ಎಂದರು.

ಸಣ್ಣ ಸಣ್ಣ ಮೀನುಗಾರರ ಬೋಟ್‌ಗಳನ್ನು ನಿಲ್ಲಿಸಲು ಜಾಗದ ಸಮಸ್ಯೆ ಇದೆ. ಅದರ ಪರಿಹಾರಕ್ಕೆ ಜಿಲ್ಲಾ ಉಸ್ತುವಾರಿ ಸಚಿವರ ಜೊತೆ ಚರ್ಚೆ ನಡೆಸಲಾಗುವುದು ಎಂದರು.ಮೀನುಗಾರರದು ದೊಡ್ಡ ಸಮುದಾಯ. ಈ ಸಮುದಾಯದ ಆರ್ಥಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಬೇಕಿದೆ. ನಿನ್ನೆ ಸಚಿವ ಸಂಪುಟ ಸಭೆಯಲ್ಲಿ ಮೀನುಗಾ-ರಿಕೆ ವಿಶ್ವವಿದ್ಯಾನಿಲಯ ಸ್ಥಾಪನೆ, ಬಂದರು ಚಟುವಟಿಕೆಗಳಿಗೆ ಬೆಂಬಲ ನೀಡುವುದು, ಮೀನುಗಾರಿಕೆ ಕಸುಬು ಹಾಗೂ ಅದರ ಶಿಕ್ಷಣಕ್ಕೆ ಒತ್ತು ನೀಡಲಾಗುವುದು ಎಂದು ತಿಳಿಸಿದರು. ಮಂಗಳೂರು ಮತ್ತು ಕಾರವಾರದಲ್ಲಿ ಸಮುದ್ರ ಪಕ್ಕದಲ್ಲಿರುವ ಮೀನುಗಾರರಿಗೆ ಅಗತ್ಯ ಇರುವ ಎಲ್ಲಾ ರೀತಿಯ ಸಹಾಯ ಮಾಡಲು ನಿರ್ಧ-ರಿಸಿದ್ದೇನೆ. ಮೀನುಗಾರರು ತಮ ಸಮಸ್ಯೆಗಳ ಬಗ್ಗೆ ಈ ಕ್ಷಣದಲ್ಲಿ ನನ್ನ ಬಳಿ ಹೇಳಲು ಹಿಂಜರಿಯುತ್ತಿರಬಹುದು. ಅದಕ್ಕೆ ಭಯದ ವಾತಾವರಣ ಅಥವಾ ಮಾಫಿಯಾ ಕಡಿವಾಣ ಇರಬಹುದು. ವಾಸ್ತವ ತಿಳಿದುಕೊಳ್ಳಲು ಅಧಿಕಾರಿಗಳಿಂದ ಗುಪ್ತ ವರದಿ ಪಡೆಯುತ್ತೇನೆ. ನ್ಯಾಯಯುತ ವ್ಯವಹಾರ ನಡೆಸಲು ಅಗತ್ಯ ಕ್ರಮ ಕೈಗೊಳ್ಳುತ್ತೇನೆ ಎಂದರು.

ಕೆಲವು ಕಡೆ ಹೂಳು ತೆಗೆಯದೆ ಬೋಟ್‌ಗಳು ಮುಳುಗಡೆಯಾಗುತ್ತಿವೆ. ಹೂಳು ತೆಗೆದು ಅದನ್ನು ಸಮುದ್ರಕ್ಕೆ ಹಾಕಬೇಕು ಎಂದು ಕೆಲವರು ಹೇಳುತ್ತಿದ್ದಾರೆ. ಇನ್ನೂ ಕೆಲವರು ಸಮುದ್ರದ ಪಕ್ಕದಲ್ಲೇ ಹೆಚ್ಚುವರಿ ಜಮೀನನ್ನು ಮೀಸಲಿಟ್ಟು, ಹೂಳಿನ ಮಣ್ಣನ್ನು ಸುರಿಯಬೇಕು ಎಂದು ಸಲಹೆ ನೀಡಿದ್ದಾರೆ. ಇದನ್ನು ಪರಿಶೀಲನೆ ಮಾಡುವುದಾಗಿ ಹೇಳಿದರು.ಕೇಂದ್ರ ಸರ್ಕಾರದ ಸಾಗರಮಾಲ ಯೋಜನೆಯಡಿ 25 ರಿಂದ 30 ಕೋಟಿ ರೂ. ಗಳು ಬಳಕೆ ಆಗದೆ, ವಾಪಸ್ ಹೋಗಿರುವ ಬಗ್ಗೆ ವರದಿ ಪಡೆಯುತ್ತೇನೆ. ಈಗಿನ ಪರಿಸ್ಥಿತಿಯಲ್ಲಿ ರಾಜ್ಯ ಸರ್ಕಾರವೇ ಹೂಳು ತೆಗೆಯಲು ಕ್ರಮ ವಹಿಸುವ ಬಗ್ಗೆಯೂ ಚರ್ಚೆ ನಡೆಸಲಾಗುವುದು ಎಂದರು. ಮೀನುಗಾರ-ರಿಗೆ ಆಸ್ಪತ್ರೆ, ಶೌಚಾಲಯ ಸೇರಿದಂತೆ ಇತರ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

# ಟಿಎಂಸಿ ಹೆಸರು-ಚಿಹ್ನೆಯನ್ನು ಸ್ಥಗಿತ : ಆಯೋಗದ ಕ್ರಮದ ವಿರುದ್ಧ ಸುಪ್ರೀಂ ಮೆಟ್ಟಿಲೇರಿದ ಮಮತಾ

ನವದೆಹಲಿ: ತೃಣಮೂಲ ಕಾಂಗ್ರೆಸ್ (ಟಿಎಂಸಿ) ಪಕ್ಷದ ಹೆಸರು ಮತ್ತು ಅಧಿಕೃತ 'ಹೂವು-ಹುಲ್ಲು' ಚಿಹ್ನೆಯನ್ನು ತಾತ್ಕಾಲಿಕವಾಗಿ ಸ್ಥಗಿ-ತಗೊಳಿಸಿರುವ ಕೇಂದ್ರ ಚುನಾವಣಾ ಆಯೋಗದ ನಿರ್ಧಾರವನ್ನು ಪ್ರಶ್ನಿಸಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ನೇತೃತ್ವದ ಬಣವು ಸುಪ್ರೀಂ ಕೋರ್ಟ್ ಮೆಟ್ಟಿಲೇರಿದೆ. ಪಕ್ಷದ ಮೇಲಿನ ಅಧಿಕಾರಕ್ಕಾಗಿ ಮಮತಾ ಬ್ಯಾನರ್ಜಿ ನೇತೃತ್ವದ ಬಣ ಮತ್ತು ರಿತಬ್ರತ ಬ್ಯಾನರ್ಜಿ ನೇತೃತ್ವದ ಬಂಡಾಯ ಬಣದ ನಡುವೆ ತೀವ್ರ ಪೈಪೋಟಿ ಏರ್ಪಟ್ಟಿದೆ. ಮುಂಬರುವ ಉಪಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಚುನಾವಣಾ ಆಯೋಗವು ಎರಡೂ ಬಣಗಳಿಗೆ ತಾತ್ಕಾಲಿಕ ಹೆಸರು ಹಾಗೂ ಹೊಸ ಚಿಹ್ನೆಗಳನ್ನು ಹಂಚಿಕೆ ಮಾಡಿದೆ. ಮಮತಾ ಬಣಕ್ಕೆ 'ಮಮತಾ ಆಲ್ ಇಂಡಿಯಾ ತೃಣಮೂಲ ಕಾಂಗ್ರೆಸ್' ಎಂಬ ಹೆಸರು ಮತ್ತು 'ಫುಟ್‌ಬಾಲ್ ಆಟಗಾರ' ಚಿಹ್ನೆ, ರಿತಬ್ರತ ಬಣಕ್ಕೆ 'ಡೆಮಾಕ್ರಟಿಕ್ ತೃಣಮೂಲ ಕಾಂಗ್ರೆಸ್' ಎಂಬ ಹೆಸರು ಹಾಗೂ 'ಲಕೋಟೆ' ಚಿಹ್ನೆ ನೀಡಲಾಗಿದೆ.

ಬಂಡಾಯ ನಾಯಕರ ವಾದವನ್ನು ಆಲಿಸುವಾಗ ಚುನಾವಣಾ ಆಯೋಗವು ಟಿಎಂಸಿ ಪಕ್ಷದ ಮೂಲ ಸಾಂಸ್ಥಿಕ ರಚನೆ ಮತ್ತು ಪದಾಧಿಕಾರಿಗಳ ಬಲವನ್ನು ಸರಿಯಾಗಿ ಪರಿಗಣಿಸಿಲ್ಲ ಎಂದು ಮಮತಾ ಬಣ ತನ್ನ



ಅರ್ಜಿಯಲ್ಲಿ ಆರೋಪಿಸಿದೆ. ಪಕ್ಷಾಂತರ ನಿಷೇಧ ಕಾಯ್ದೆಯಡಿ 10 ಬಂಡಾಯ ಶಾಸಕರ ವಿರುದ್ಧ ಸಲ್ಲಿಸಲಾಗಿರುವ ಅನರ್ಹತಾ ಅರ್ಜಿಗಳ ಕುರಿತು ತೀರ್ಪು ನೀಡಲು ರಾಜ್ಯ ವಿಧಾನಸಭೆಯ ಸ್ಪೀಕರ್ ವಿಳಂಬ ಮಾಡುತ್ತಿರುವುದನ್ನೂ ಮಮತಾ ಬಣ ನ್ಯಾಯಾಲಯದಲ್ಲಿ ಪ್ರಶ್ನಿಸಿದೆ. ಬಂಡಾಯ ಬಣದ ನಾಯಕ ರಿತಬ್ರತ ಬ್ಯಾನರ್ಜಿ ಅವರಿಗೆ ನೀಡಿರುವ ವಿರೋಧ ಪಕ್ಷದ ನಾಯಕನ ಮಾನ್ಯತೆಯನ್ನು ರದ್ದುಗೊಳಿಸುವಂತೆ ಕೋರಿ ಮತ್ತೊಂದು ಪ್ರತ್ಯೇಕ ಅರ್ಜಿಯನ್ನೂ ಸಲ್ಲಿಸಲಾಗಿದೆ.

ಭಾರತೀಯ ರಾಜಕೀಯದಲ್ಲಿ ಶಿವಸೇನೆ ಮತ್ತು ಎನ್‌ಸಿಪಿ ಪಕ್ಷಗಳ ಆಂತರಿಕ ಸೀಳುವಿಕೆಯ ಸಂದರ್ಭದಲ್ಲಿಯೂ ಚುನಾವಣಾ ಆಯೋಗವು ಪಕ್ಷದ ಹೆಸರು ಮತ್ತು ಚಿಹ್ನೆಗೆ ಸಂಬಂಧಿಸಿದ ವಿವಾದಗಳಲ್ಲಿ ಮಧ್ಯಂತರ ಕ್ರಮಗಳನ್ನು ಕೈಗೊಂಡಿತ್ತು. ಆ ಪ್ರಕರಣಗಳು ಕೂಡ ಸುಪ್ರೀಂ ಕೋರ್ಟ್ ಅಂಗಳ ತಲುಪಿದ್ದವು.

ಟಿಎಂಸಿಯೊಳಗಿನ ಬಿಕ್ಕಟ್ಟು ಜೂನ್‌ನಲ್ಲಿ ಬಹಿರಂಗ ಸ್ವರೂಪ ಪಡೆದುಕೊಂಡಿತ್ತು. ಜೂನ್ 22ರಂದು ರಿತಬ್ರತ ಬ್ಯಾನರ್ಜಿ ನೇತೃತ್ವದ ಬಂಡಾಯ ಶಾಸಕರ ಗುಂಪು ಪ್ರತ್ಯೇಕ ಸಭೆ ನಡೆಸಿ ಮಮತಾ ಬ್ಯಾನರ್ಜಿಯವರ ಪಕ್ಷದ ಅಧ್ಯಕ್ಷ ಸ್ಥಾನವನ್ನೇ ಪ್ರಶ್ನಿಸಿತ್ತು. ಬಂಡಾಯ ಬಣವು ತನ್ನ ಬಳಿ ಪಕ್ಷದ ಶಾಸಕರಲ್ಲಿ ಮೂರನೇ ಎರಡರಷ್ಟು ಬೆಂಬಲವಿದೆ ಎಂದು ಹೇಳಿಕೊಂಡಿತ್ತು. ಬಳಿಕ ಎರಡೂ ಬಣಗಳು ಪ್ರತ್ಯೇಕ ರಾಷ್ಟ್ರೀಯ ಕಾರ್ಯಕಾರಿ ಸಮಿತಿ ಪಟ್ಟಿಗಳನ್ನು ಚುನಾವಣಾ ಆಯೋಗಕ್ಕೆ ಸಲ್ಲಿಸಿ, ಪಕ್ಷದ ಹೆಸರು, ಆಸ್ತಿ, ಬ್ಯಾಂಕ್ ಖಾತೆಗಳು ಹಾಗೂ ಚುನಾವಣಾ ಚಿಹ್ನೆಯ ಮೇಲಿನ ಹಕ್ಕು ಪ್ರತಿಪಾದಿಸಿದ್ದವು.

# ಕನಸುಗಳು ಎಂದರೇನು?

ಕನಸು ಒಂದು ಅನುಭವ. ಸನ್ನಿವೇಶಗಳನ್ನು ನಿಜವಾಗಿಯೂ ಅನುಭವಿಸಿದ ಹಾಗೇ ಭಾಸವಾಗುತ್ತದೆ. ಆದ್ದರಿಂದಲೆ ಇದಕ್ಕೆ ಹತ್ತು ಹಲವು ಬಗೆಯ ಅರ್ಥಗಳು ಸಿಗುತ್ತವೆ. ಆಸೆ, ಆಕಾಂಕ್ಷೆ, ಉಲ್ಲಾಸ, ಭಯ, ನಲುಮೆ, ಪ್ರೀತಿ, ದುಗುಡ, ಹೀಗೆ ವಿಭಿನ್ನ ಭಾವನೆಗಳನ್ನು ಕೊಡುವ ಕನಸು ಒಂದು ವಿಚಿತ್ರ ಭಾವ. ಅಲ್ಲವೇ ಕನಸು ಕಾಣದವರಿಲ್ಲ. ಪುಟ್ಟ ಮಕ್ಕಳಿಂದ ಹಿಡಿದು ಹಣ್ಣು ಹಣ್ಣು ಮುದುಕರವರೆಗೂ ಎಲ್ಲರೂ ಕನಸಿನ ಲೋಕದಲ್ಲಿ ವಿಹರಿಸುವವರೇ. ಇಂಥ ಕನಸುಗಳೂ ಭವಿಷ್ಯದ ಸಂಕೇತಗಳೇ... ಎಂಬ ಪ್ರಶ್ನೆ ಜ್ಯೋತಿಷಿಗಳಿಂದ ಹಿಡಿದು ವಿಜ್ಞಾನಿಗಳವರೆಗೂ ಕಾಡಿದ್ದಿದೆ. ಮನಃಶಾಸ್ತ್ರದಲ್ಲೂ ಕನಸಿನ ಲೋಕದ ಬಗ್ಗೆ ಸಾಕಷ್ಟು ಸಂಶೋಧನೆಗಳೇ ನಡೆದಿವೆ.

ವೈಜ್ಞಾನಿಕ ಅಧ್ಯಯನದ ಪ್ರಕಾರ ಕನಸುಗಳೆಂದರೆ, ಮನಸ್ಸಿನಲ್ಲಿ ಶೇಖರಗೊಂಡ ಈಡೇರದ ಆಸೆ-ಆಕಾಂಕ್ಷೆ, ಪ್ರೇರಣೆಗಳು, ಕನನಸಿನ ರೂಪವನ್ನು ಕಾಣುತ್ತವೆ. ಆ ಕನಸಿನಲ್ಲಿ ಕಾಣುವ ವಿವಿಧ ದಶ್ಯಾವಳಿಗಳಿಗೆ, ಚಿಹ್ನೆಗಳಿಗೆ ತನ್ನದೇ ಅರ್ಥವನ್ನು ಇದೆ. ಕನಸು ಎಂದರೆ ಸುಪ್ತ ಸಮಸ್ಯೆಗಳಿಗೆ, ಸುಪ್ತಬಯಕೆಗಳಿಗೆ ಮನಸು ಧ-ರಿಸಿರುವ ಮುಖವಾಡ. ಕನಸು ನಮ್ಮ ಮನಸ್ಸಿನ ಸಮತೋಲನ ಕಾಪಾಡಲು ಸಹಾಯವಾಗುತ್ತದೆ ಎಂಬುದು ವಿಜ್ಞಾನದ ವಾದ. ಮನಸ್ಸಿನಲ್ಲಿರುವ ಆತಂಕ ಕನಸುಗಳಲ್ಲಿ ಕಂಡು ನಂತರವೂ ಸುಪ್ತ ಮನಸ್ಸಿನ ಒತ್ತಡ ಕಡಿಮೆಯಾಗದಿದ್ದರೆ , ಮಿತಿಮೀರಿದ ಮಾನಸಿಕ ದಂದ್ವ ತುಮುಲಗಳಿದ್ದಲ್ಲಿ ನಮ್ಮ ಮಾನಸಿಕ ಸಮತೋಲನ ವ್ಯವಸ್ಥೆ ಕುಸಿದು ನಾವು ಕೆಲವೊಂದು ಮಾನಸಿಕ ಅಸ್ವಸ್ಥಗೆ ಒಳಗಾಗುತ್ತೇವೆ. ಈಡೇರಿಸಲಾಗದ ಆಸೆಗಳನ್ನು ಕಲ್ಪನೆಗಿಳಿಸುವ ರಹದಾರಿಯೇ ಕನಸು.
ಕನಸಿಗೊಂದು ಭಾಷೆಯಿದೆ. ಅದು ಭಾವನೆಗಳ ಸಮುಚ್ಚಯ. ಲಹರಿಯಂತೆ ಪ್ರವಾಹಿಸುವ ಚಿತ್ರಗಳಿಗೆ ಇಲ್ಲಿ ಕಡಿವಾಣವಿಲ್ಲ. ಆ ದಶ್ಯಗಳಿಗೆ ತಮ್ಮದೇ ಆದ ಅರ್ಥವಿದೆ. ಕನಸು ಕನಸುಗಾರನ ಅಜಾಗೃತ ಮನಸ್ಸಿನ ಸಮಸ್ಯೆಗಳಿಗೆ ಆಧಾರ.
ಕನಸುಗಳನ್ನು ನಾವು 3 ವಿಭಾಗಗಳಾಗಿ ವಿಂಗಡಿಸಬಹುದು .



1
.ಅರ್ಥವಾಗುವ ಕನಸುಗಳು.
ಇಲ್ಲಿ ನಮಗೆ ವಸ್ತುಗಳು ನೇರವಾಗಿ ಪ್ರಕಟಗೊಳ್ಳುತ್ತವೆ. ಬಡವನಿಗೆ ತಾನು ಶ್ರೀಮಂತನಾಗುವ ಕನಸು. ಮಕ್ಕಳಿಲ್ಲದವರಿಗೆ ಮಕ್ಕಳಾಗುವ ಕನಸು. ಇಂತ ಕನಸು ವ್ಯಕ್ತಿಯ ಮನಸ್ಸಿನ ಬಯಕೆ , ಆಲೋಚನೆಗಳನ್ನು ನೇರವಾಗಿ ತೋರಿಸಿಕೊಡುತ್ತದೆ.
2.ಅರ್ಥವಾಗುವ ಅಂದರೆ ಗೊಂದಲ ಉಂಟು ಮಾಡುವ ಕನಸು ಇಲ್ಲಿ ಸಹ ಕನಸುಗಳು ಅರ್ಥವಾಗುತ್ತದೆ. ಕನಸುಗಳು ನೇರವಾಗಿರುತ್ತದೆ. ಆದ್ರೆ ಅ ಕನಸು ಯಾಕೆ ಬಿತ್ತು ಎಂಬುದು ಅರ್ಥವಾಗದೆ ನಾವು ತಲೆಕೆಡಿಸಿ ಕೊಳ್ಳುತ್ತೇವೆ. ಅಷ್ಟೊಂದು ಪರಿಚವಿಲ್ಲದ ವ್ಯಕ್ತಿಯೊಬ್ಬರು ನಮ್ಮ ಮನೆಗೆ ಬಂದಂತೆ ಅವರೊಡನೆ ಕುಳಿತು ಸಮಯ ಕಳೆದಂತೆ .. ಇತ್ಯಾದಿ..ಒಂದಕ್ಕೊಂದು ಸಂಬಂದವಿರುದಿಲ್ಲ .ಅದರ ಬಗ್ಗೆ ಎಷ್ಟೋ ಸಲ ಯೋಚನೆ ಮಾಡಿ ತಲೆಕೆಡಿಸಿಕೊಳ್ಳುತ್ತೇವೆ.
3. ಅರ್ಥವಾಗದ ವಿಚಿತ್ರ ಕನಸುಗಳು.
ಇಲ್ಲಿ ಕನಸಿನ ಪ್ರತಿ ದ್ರಶ್ಯವು ಸಾಂಕೇತಿಕ ನಿಗೂಢ ಅರ್ಥವನ್ನು ಒಳಗೊಂಡಿರುತ್ತದೆ. ಉದಾ: ಹುಡುಗಿಯೊಬ್ಬಳು ದಿನವೂ ವಿಚಿತ್ರ ಮತ್ತು ಭಯಾನಕ ಕನಸುಗಳನ್ನು ಕಾಣುತ್ತಿದ್ದಳು. ತನ್ನನ್ನು ನಿರ್ಜನ ಪ್ರದೇಶದಲ್ಲಿ ಯಾರೋ ಅಟ್ಟಿಸಿಕೊಂಡು ಹೋದಂತೆ ತಪ್ಪಿಸಿಕೊಳ್ಳಲು ಶತಪ್ರಯತ್ನ. ಕೆಲವೊಂದು ಬಾರಿ ಕನಸುಗಳು ಮುಂದಾಗುವ ಶ್ರೇಯಸ್ಸು-ಸಮಸ್ಯೆಗಳನ್ನು ಸೂಚಿಸುತ್ತದೆ.

ಪುರಾಣ, ಉಪನಿಷತ್ತುಗಳಲ್ಲೂ ಕನಸಿನ ಸಾಕಷ್ಟು ಉಲ್ಲೇಖಗಳಿವೆ. ರಾಮಾಯಣದಲ್ಲಿ ತ್ರಿಜಟೆಗೆ ಬಿದ್ದ ಕನಸು ನಿಜವಾಗಿದ್ದು ಎಲ್ಲ-ರಿಗೂ ತಿಳಿದಿರುವ ವಿಷಯ. ಪೂರ್ವದಲ್ಲಿ ಪರಮಾತ್ಮನು ತನ್ನ ಭಕ್ತರ ಉದ್ಧಾರಕ್ಕಾಗಿ ಅವರ ಮನವರಿಕೆಗಳನ್ನು ಪೂರ್ತಿಗೊಳಿಸಲು ಆಗಾಗ್ಗೆ ಸ್ವಪ್ನದಲ್ಲಿ ಕಾಣಿಸಿಕೊಂಡು ಅನೇಕ ಮಹತ್ವದ ವಿಷಯವನ್ನು ಹೇಳಿರುವುದನ್ನು ನಾವು ಅನೇಕ ಪುರಾಣಗಳಲ್ಲಿ ಕೇಳಿದ್ದೇವೆ.ಜ್ಯೋತಿಷ್ಯಶಾಸ್ತ್ರದಲ್ಲಿ ಸ್ವಪ್ನಫಲ ಶಾಸ್ತ್ರವೂ ಒಂದು ಭಾಗವಾಗಿದೆ. ಸ್ವಪ್ನಫಲವು ನಮಗೆ ಮುಂದೆ ಸಂಭವಿಸಬಹುದಾದ ಸುಖ ದುಃಖಗಳನ್ನು ಖಂಡಿತ ತಿಳಿಸುತ್ತವೆ ಎಂಬುದು ಅನುಭವಿಗಳ ಅಭಿಪ್ರಾಯ. ಎಚ್ಚರದಲ್ಲಿ ಕಂಡದ್ದನ್ನು, ಕೇಳಿದ್ದನ್ನು, ಅನುಭವಿಸಿದ್ದನ್ನು ಬಯಸಿ ಪಡೆಯದ್ದನ್ನು, ಮನಸ್ಸಿನ ಕಲ್ಪನೆಗಳನ್ನು ಕಾಣುವುದು ಸ್ವಪ್ನವೆನಿಸುವುದು. ಮುಂದಾಗುವುದನ್ನು ಮುಂಚಿತವಾಗಿ ಕನಸಿನಲ್ಲಿ ಕಾಣುವುದು, ಫಲ ಕೊಡುವಂತಹುದು. ಅಜೀರ್ಣ ಮುಂತಾದ ರೋಗಬಾಧೆಯಿಂದ ಉಂಟಾಗುವ ಸ್ವಪ್ನಕ್ಕೆ ಅರ್ಥ ಕಲ್ಪಿಸಿಕೊಳ್ಳಬಾರದು.ಸ್ವಪ್ನಫಲಗಳನ್ನು ಈ ರೀತಿಯಾಗಿ ಜ್ಯೋತಿಷ್ಯಾಸ್ತ್ರದಲ್ಲಿ ತಿಳಿಸಿರುತ್ತಾರೆ.

ಸ್ವಪ್ನದಲ್ಲಿ ನಮ್ಮ ನೆಚ್ಚಿನ ದೈವ, ಮುತ್ತೈದೆಯರು, ಬಿಳಿ ವಸ್ತುಗಳು, ನದಿಗಳು, ಪುಣ್ಯಕ್ಷೇತ್ರಗಳು, ತುಳಸಿ ಗಿಡ, ಕಂಡರೆ ಶುಭಫಲಗಳುಂಟಾಗುತ್ತವೆ. ಕನಸಿನಲ್ಲಿ ಬೆಂಕಿಂ-ು ಜ್ವಾಲೆಯನ್ನು ಕಂಡರೆ ಭೋಗ ಸಂಪತ್ತು ಲಭಿಸುತ್ತದೆ. ಅನ್ನವನ್ನು ಕಂಡರೆ ಕೈಗೊಂಡ ಕಾರ್ಯ ನೆರವೇರುವುದು. ಸತ್ತವರು ಬದುಕಿಬಂದಂತಾದರೆ ಮರಣಭಯ ಉಂಟಾಗುತ್ತದೆ. ಕನಸಿನಲ್ಲಿ ಹಾವು ಕಂಡರೆ ಅಪಮೃತ್ಯು ಭಯವೆಂದು ಹೇಳುತ್ತಾರೆ. ಆದ-ರೆ ಮನಸ್ಸಿನಲ್ಲಿ ಲೈಂಗಿಕ ಆಸಕ್ತಿಗಳಿದ್ದಾಗ ಹಾವು ಕನಸಿನಲ್ಲಿ ಬೀಳುವುದೆಂದು ಮನೋವಿಜ್ಞಾನಿಗಳು ತಿಳಿಸಿರುತ್ತಾರೆ.

ಬಾಳೆಹಣ್ಣು, ಮಾವಿನಹಣ್ಣು ಮುಂತಾದ ಹಣ್ಣನ್ನು ಕಂಡರೆ ಸಂತಾನಪ್ರಾಪ್ತಿಯಾಗುವುದು. ಇಲ್ಲವೆ ಕೈಗೊಂಡ ಕಾರ್ಯಗಳು ನೆರವೇರುವುವು. ಸ್ವಪ್ನದಲ್ಲಿ ಭೋಜನ ಮಾಡಿದಂತೆ ಕಂಡರೆ ರೋಗಭಯ.
ಸ್ವಪ್ನದಲ್ಲಿ ಮಲವನ್ನು ಕಂಡರೆ ಧನಪ್ರಾಪ್ತಿ ಎಂದು ತಿಳಿಯಬೇಕು. ಮಳೆ ಬಂದಂತೆ ಕಂಡರೆ ಪ್ರಯಾಣ. ಹಾರಿಕೊಂಡು ಹೋದಂತೆ ಕಂಡರೆ ಸ್ಥಾನ ಪಲ್ಲಟ. ಕೆಂಪು ಇಲ್ಲವೆ ಕಪ್ಪು ಬಣ್ಣದ ವಸ್ತುಗಳನ್ನು ಕಂಡರೆ ಕೇಡು. ಕನಸಿನಲ್ಲಿ ಶೀತ, ನೆಗಡಿಯಾದರೆ ಮನೆಗೆ ನೆಂಟರು ಬರುವರು. ಸಂಗೀತ ಕೇಳಿದರೆ ಸಾಲ ಮಾಡುವ ಪ್ರಸಂಗ ಬಂದೊದಗಬಹುದು. ಜಗಳ ಮಾಡುತ್ತಿರುವುದನ್ನು ಕಂಡರೆ ತೊಂದರೆ. ದೇವರ ಪೂಜೆ ಮಾಡುತ್ತಿದ್ದಂತೆ ಕಂಡರೆ ಮಾಡಿದ್ದ ಸಾಲ ಪರಿಹಾರವಾಗುವುದು. ವಿಧವೆಯರು, ಸನ್ಯಾಸಿ, ಬೆತ್ತಲೆ ಇದ್ದವರನ್ನು ಕಂಡರೆ ದುಃಖಕರ. ಮದ್ಯ, ಹೆಂಡಗಳನ್ನು ಕಂಡರೆ ಶುಭಸೂಚಕ. ಹಲ್ಲು ಬಿದ್ದಂತೆ ಸ್ವಪ್ನವಾದರೆ ವ್ಯಸನ. ಸೂರ್ಯ ಚಂದ್ರರನ್ನು ಕಂಡರೆ ರೋಗನಾಶ. ಹೆಣವನ್ನು ಕಂಡರೆ, ತಾನೇ ಸತ್ತಂತೆ ಕಂಡರೆ ದೀರ್ಘಾಯುಷಿ. ಸತ್ತವರು ಬಂದು ಅಪ್ಪಿದರೆ ಸಾವು ಹೆಣ್ಣು ಕಂಡರೆ ಶುಭಸೂಚಕ
ಕನಸುಗಳು ರಾತ್ರಿ 9ಗಂಟೆಯಿಂದ 12ಗಂಟೆಯೊಳಗೆ ಬಿದ್ದರೆ ಒಂದು ತಿಂಗಳೊಳಗಾಗಿ ಫಲವು ಕಂಡುಬರುತ್ತದೆ. ರಾತ್ರಿ 12 ಗಂಟೆಯಿಂದ 3 ಗಂಟೆಯೊಳಗಾಗಿ ಬಿದ್ದ ಸ್ವಪ್ನಕ್ಕೆ ಒಂದು ವಾರದೊಳಗಾಗಿ ಫಲವು ಕಂಡುಬರುವುದು. ಬೆಳಗಿನ ಜಾವ 3 ಗಂಟೆಯಿಂದ 6 ಗಂಟೆಯ ಒಳಗಾಗಿ ಬಿದ್ದ ಸ್ವಪ್ನಕ್ಕೆ ಮೂರು ದಿವಸಗಳೊಳಗಾಗಿ ಫಲವು ಕಂಡುಬರುವುದು.




ಪ್ರಶಾಂತಭಟ್
ಕೋಟೇಶ್ವರ

# ಅತಿ ಅವಸರ ಸಲ್ಲದ

ಪುಟ್ಟ ಬಾಲಕ ಶಾಮ ಯಾವತ್ತೂ ಅವಸರದಲ್ಲಿಯೇ ಇರುತ್ತಿದ್ದ ಆತನಿಗೆ ಪ್ರತಿಯೊಂದು ವಿಷಯವು ತರಾತು-ರಿಯಲ್ಲಿ ಆಗಿಬಿಡಬೇಕು. ಅತ್ಯಂತ ವೇಗವಾದ ಇಂಟರ್ನೆಟ್ ಸೇವೆಯನ್ನು ಬಯಸುತ್ತಿದ್ದ ಆತ ಹೊಸ ಹೊಸ ಆಟದ ಸಾಮಾನುಗಳಿಗಾಗಿ ಆಶಿಸುತ್ತಿದ್ದ... ಆತನ ಅವಸರವನ್ನು ನೋಡಿದರೆ ಎಲ್ ಕೆ ಜಿ ಇರುವಾಗಲೇ ಒಂದನೇ ತರಗತಿಗೆ, 5ನೇ ತರಗತಿ ಇರಬೇಕಾದ ವ್ಯಕ್ತಿ ಇಂಜಿನಿಯರಿಂಗ್ ಕಾಲೇಜಿನ ಮೆಟ್ಟಿಲು ಏರಬೇಕು ಎಂದು ತಮಾಷೆ ಮಾಡುವಷ್ಟು ಇರುತ್ತಿತ್ತು. ಯಾವುದೇ ವಿಷಯಕ್ಕೂ ವ್ಯವಧಾನ ಎಂಬ ಪದದ ಅರಿವೇ ಇರಲಿಲ್ಲ ಬಹುಶಹ ಆತನ ನಿಘಂಟಿನಲ್ಲಿ ತಾಳ್ಮೆ ಎಂಬ ಪದಕ್ಕೆ ಅರ್ಥವೇ ಇರಲಿಲ್ಲ ಅದೊಂದು ದಿನ ಸಾಯಂಕಾಲ ಆತ ತನ್ನ ಅಜ್ಜ ಮನೆಯ ವರಾಂಡದಲ್ಲಿ ಒಂದು ಹಳೆಯದಾದ ಆದರೆ ಅತ್ಯಂತ ಕಲಾತ್ಮಕವಾದ ಕೆತ್ತನೆಯನ್ನು ಹೊಂದಿದ ಸುಂದರವಾದ ಪುಟ್ಟ ಪೆಟ್ಟಿಗೆಯನ್ನು ಮುಂದಿಟ್ಟುಕೊಂಡು ಕುಳಿತಿರುವುದನ್ನು ನೋಡಿದ. ಅದೊಂದು ಸಂಪೂರ್ಣ ಖಾಲಿಯಾದ ಪೆಟ್ಟಿಗೆಯಾಗಿತ್ತು. ಅಜ್ಜ ಆ ರೀತಿ ಪೆಟ್ಟಿಗೆಯ ಮುಂದೆ ಸುಮ್ಮನೆ ಕುಳಿತಿರುವುದನ್ನು ನೋಡಿ ಆತನಿಗೆ ಸೋ-ಜಿಗವಾಯಿತು.

ಅಂತೆಯೇ ತನ್ನ ಅಜ್ಜನನ್ನು ಕುರಿತು ಅಜ್ಜ... ಅದೇಕೆ ಹಾಗೆ ಖಾಲಿ ಪೆಟ್ಟಿಗೆಯ ಮುಂದೆ ಕುಳಿತು ಅದನ್ನು ನೋಡುತ್ತಿರುವಿರಿ... ಎಷ್ಟೊಂದು ಸಮಯ ಹಾಳಾಯಿತು ಅಲ್ಲವೇ? ಎಂದು ಕೇಳಿದ. ಮೊಮ್ಮಗನ ಮಾತನ್ನು ಕೇಳಿದ ಅಜ್ಜ ನಸುನಗುತ್ತ ನುಡಿದ ಇದೊಂದು ಹಳೆಯ ಖಾಲಿ ಪೆಟ್ಟಿಗೆ ಎಂದು ನೀನು ಭಾವಿಸಿರುವೆ ಅಲ್ಲವೇ ?.... ಖಂಡಿತವಾಗಿಯೂ ಇದು ಖಾಲಿ ಪೆಟ್ಟಿಗೆಯಲ್ಲ ಇದರಲ್ಲಿ ನಾನು ನನ್ನ ಚಿನ್ನದ ಟಿಕೆಟ್ಗಳನ್ನು ಇಡುತ್ತೇನೆ ಎಂದು ಹೇಳಿದ. ಪೆಟ್ಟಿಗೆಯ ಒಳಭಾಗವನ್ನು ನಿರುಕಸಿ ನೋಡಿದ ಶಾಮ 'ಆದರೆ ಅಜ್ಜ ಇದರಲ್ಲಿ ಏನೂ ಇಲ್ಲ' ಎಂದು ಲಗು ಬಗೆಯಿಂದ ಹೇಳಿದ. 'ನಿನಗೆ ಪೆಟ್ಟಿಗೆ ಖಾಲಿಯಾಗಿ ಕಾಣುತ್ತಿರುವುದರಲ್ಲಿ ಯಾವುದೇ ತಪ್ಪಿಲ್ಲ, ಕಾರಣ ನೀನು ನಿನ್ನ ಕಣ್ಣಿನಿಂದ ಪೆಟ್ಟಿಗೆಯನ್ನು ನೋಡುತ್ತಿರುವೆಯೇ ಹೊರತು ಮನಸ್ಸು ಹಾಗೂ ಹೃದಯದಿಂದ ಅಲ್ಲ ' ಎಂದು ಅಜ್ಜ ಒತ್ತಿ ಹೇಳಿದ. ಮತ್ತೆ ಮೊಮ್ಮಗನನ್ನು 'ಇಲ್ಲಿ ಕುಳಿತುಕೋ ನಾನು ನಿಮಗೆ ನನ್ನ



ಕೊನೆಯ ಟಿಕೆಟ್ ಅನ್ನು ನೀಡುತ್ತೇನೆ' ಎಂದು ಅಜ್ಜ ಹೇಳಿದ ಆಶ್ಚರ್ಯವಾದರೂ ಮರು ಮಾತನಾಡದೆ ಅಜ್ಜ ತೋರಿದ ಸ್ಥಳದಲ್ಲಿ ಶ್ಯಾಮ ಕುಳಿತುಕೊಂಡ. ಮುಂದಿನ ಐದು ನಿಮಿಷಗಳ ಕಾಲ ಅಜ್ಜ ಏನನ್ನೂ ಹೇಳಲಿಲ್ಲ ಹಾಗೂ ಮೊಮ್ಮಗ ಏನನ್ನು ಕೇಳಲಿಲ್ಲ. ಐದು ನಿಮಿಷ ಒಂದು ಯುಗದಂತೆ ಭಾಸವಾಯಿತು ಶಾಮನಿಗೆ... ಆದರೆ ಆ ಸಮಯದಲ್ಲಿ ಆತ ಅನಿವಾರ್ಯವಾಗಿ ಅಜ್ಜನ ಜೊತೆ ಕುಳಿತು ಹಕ್ಕಿಗಳ ಚಿಲಿಪಿಲಿ ನಾದವನ್ನು ಕೇಳಿಸಿಕೊಂಡ. ಎಲ್ಲಿಂದಲೂ ಬೀಸಿದ ತಂಗಾಳಿಗೆ ಆತನ ಮೈಯನ್ನು ಸೋಕಿ ಮೈಮನಗಳಿಗೆ ಅತ್ಯದ್ಭುತವಾದ ಸಮಾಧಾನವನ್ನು ನೀಡಿತು. ದೂರದಿಂದ ಹಾರಿ ಬಂದ ಚಿಟ್ಟೆಯೊಂದು ಹೂವಿನ ಮಕರಂದವನ್ನು ಹೀರುವುದನ್ನು ಆತ ಗಮನಿಸಿದ. ಮೊದಲು ಮೊದಲು ಆ ರೀತಿ ಸುಮ್ಮನೆ ಕುಳಿತುಕೊಳ್ಳುವುದು ಶಾಮನಿಗೆ ಹಿಂಸೆಯೆನಿಸಿತು. ತನ್ನ ಜೇಬಲ್ಲಿರುವ ಮೊಬೈಲ್ ಫೋನನ್ನು ತೆಗೆದು ನೋಡಲೇ ಎಂದು ಒಂದು ಬಾರಿ ಯೋಚಿಸಿದ ಕೂಡ... ಆದರೆ ಅಜ್ಜನ ಮುಂದೆ ಹಾಗೆ ಮಾಡಲಾರದೆ ಸುಮ್ಮನೆ ಚಡಪಡಿಸುತ್ತಾ ಕುಳಿತುಕೊಂಡ. ಅನಿವಾರ್ಯವಾಗಿಯಾದರೂ ಒಂದೆರಡು ನಿಮಿಷಗಳ ನಂತರ ಆತನ ಮನಸ್ಸು ತನ್ನಂತಾನೆ ತಹಬಂದಿಗೆ ಬಂತು. ಆತನ ಮನಸ್ಸನ್ನು ಒಂದು ಬಗೆಯ ನಿರಾಳತೆ ಆವರಿಸಿತು.

ತಲೆಯೆತ್ತಿ ನೋಡಿದಾಗ ನೀಲಿ ಆಕಾಶ ಆತನ ಗಮನ ಸೆಳೆಯಿತು.
ತನ್ನ ಗಮನ ಸೆಳೆದ ಆಕಾಶದತ್ತ ಕೈ ಮಾಡಿದ ಶಾಮ ಅಜ್ಜನಿಗೆ ಅದೇನು ಎಂದು ಕೇಳಿದ..... ಅದು ಕೂಡ ಚಿನ್ನದ ಟಿಕೆಟ್ ಎಂದು ಅಜ್ಜ ಹೇಳಿದ. ಈಗ ಅವಾಕ್ಕಾಗುವ ಸರದಿ ಶಾಮನದಾಗಿತ್ತು ನಿಜ ಶಾಮ.... ಕೆಲ ನಿಮಿಷಗಳ, ಕ್ಷಣಗಳ ಮಟ್ಟಿಗಾದರೂ ನೀನು ನೀನಾಗಿಯೇ ಇರುವ ಗಳಿಗೆ... ಅದು ನಿನ್ನ ಬದುಕಿನ ಅತ್ಯಮೂಲ್ಯವಾದ ಟಿಕೆಟ್ ಇದ್ದಂತೆ. ಬಹಳಷ್ಟು ಜನ ಸದಾ ಓಡುತ್ತಲೇ ಇರುತ್ತಾರೆ. ಓದುವುದು, ಓದು ಮುಗಿದ ಕೂಡಲೇ ನೌಕರಿ, ನೌಕರಿ ಮುಗಿದ ಕೂಡಲೇ ಮನೆ, ಮನೆಯಿಂದ ಆಫೀಸ್ ಮತ್ತೆ ವೀಕೆಂಡ್ಗಳು, ಪ್ರಮೋಷನ್ಗಳು ಮದುವೆ ಮಕ್ಕಳು ಯಶಸ್ಸು ಹೀಗೆ ಒಂದರ ಹಿಂದೆ ಒಂದರಂತೆ ಸದಾ ಓಡುತ್ತದೆ. ಈ ಓಡುವಿಕೆಯಲ್ಲಿ ಅವರು ತಮ್ಮನ್ನು ತಾವು ಕಳೆದುಕೊಳ್ಳುತ್ತಾರೆ. ಅವರ ಗಮ್ಯ ಅವರ ಕೈಗೆ ಸಿಗುವ ಮುನ್ನವೇ ಅವರು ಮತ್ತೊಂದು ಗಮ್ಯವನ್ನು ಅರಸಿ ಮುಂದೆ ಸಾಗುತ್ತಾರೆ... ಮುಂದೆ ಅವರ ಓಟಕ್ಕೆ ಯಾವುದೇ ಅರ್ಥ ಉಳಿಯುವುದಿಲ್ಲ.
ಆದರೆ ಅಜ್ಜ... ಯಶಸ್ಸಿನ ಹಿಂದೆ ಓಡುವುದು ತಪ್ಪೇ ಸಂತೋಷವಾಗಿರಲು ಯಾವುದೇ ಯಶಸ್ಸಿನ ಅವಶ್ಯಕತೆ ಇಲ್ಲವೇ ಎಂದು ಶ್ಯಾಮ ಕೇಳಿದ ಸಣ್ಣಗೆ ನಸು ನಕ್ಕು ತಲೆಯಾಡಿಸಿದ ಅಜ್ಜ ಹೀಗೆ ಹೇಳಿದ... ಸಂತೋಷವಾಗಿರಲು ಯಶಸ್ಸು ಬೇಕಾಗಿಲ್ಲ. ಅಷ್ಟಕ್ಕೂ ಯಶಸ್ಸು ಎಂಬುದು ಕೇವಲ ನೆರಳಿನಂತೆ. ಅದನ್ನು ನೀನೆಂದಿಗೂ ಹಿಡಿಯಲು ಆಗದು. ಈಗ ನನ್ನನ್ನೇ ನೋಡು. ಇದೀಗ ನನಗೆ ನಾನು ಓವರ್ ಟೈಮ್ ಮಾಡಿದ ದಿನಗಳು ನೆನಪಾಗುವುದಿಲ್ಲ. ಯಾವಾಗ ಕಾರು ಖರೀದಿಸಿದೆ ಎಂಬುದು ಕೂಡ ನೆನಪಿಲ್ಲ. ಆದರೆ ನಿನ್ನ ಅಜ್ಜಿ ಮಾಡಿದ ಸವಿರುಚಿ ಇನ್ನೂ ನನ್ನ ನಾಲಿಗೆಯಲ್ಲಿದೆ. ನಿನ್ನ ಅಜ್ಜಿಯೊಂದಿಗೆ ಒಡನಾಡಿದ ಪ್ರತಿಯೊಂದು ಮಾತುಗಳು ನನ್ನ ಮನದ ಆಳದಲ್ಲಿದೆ. ನಿನ್ನ ಅಪ್ಪ ನನ್ನ ಮಡಿಲಲ್ಲಿ ನಗುತ್ತಾ ಮಲಗಿದ ನೆನಪು ಈಗ ತಾನೇ ಎಂಬಂತೆ ಹಚ್ಚ ಹಸಿರಾಗಿದೆ.
ಈ ಭೂಮಿಯ ಮೇಲೆ ಮಳೆ ಬಿದ್ದಾಗ ಅದರ ವಾಸನೆಗೆ ಮನ ಮುದಗೊಂಡಾಗ ನೆನಪುಗಳು ದಾಳಿ ಇಡುತ್ತವೆ.

ಆದ್ದರಿಂದ ನಮ್ಮ ಬದುಕು ಧಾವಂತದಿಂದ ಓಡುವುದರಲ್ಲಿ ಇಲ್ಲ... ನಮ್ಮ ಬದುಕು ಇರುವುದು ನಾವು ಪ್ರಸ್ತುತ ಇರುವ ಗಳಿಗೆಯನ್ನು ನೆಮ್ಮದಿಯಿಂದ ಸವಿಯುವುದರಲ್ಲಿ ಎಂದು ಹೇಳಿ ದೀರ್ಘವಾಗಿ ನಿಟ್ಟುಸಿರಿಟ್ಟ. ತನ್ನ ಕೈಯಲ್ಲಿರುವ ಪುಟ್ಟ ಕಲಾತ್ಮಕ ಪೆಟ್ಟಿಗೆಯನ್ನು ಶಾಮನ ಕೈಯಲ್ಲಿ ಇಡುತ್ತಾ ಅಜ್ಜ ಹೇಳಿದ... ಮಗು ಶಾಮ ಈ ಜಗತ್ತು ನಿನಗೆ ಸಾವಿರಾರು ವಸ್ತುಗಳನ್ನು ಮಾರಲು ಪ್ರಯತ್ನಿಸುತ್ತದೆ. ಅವುಗಳನ್ನು ಖರೀದಿಸಿದರೆ ಮಾತ್ರ ನೀನು ಸಂತೋಷವಾಗಿರುವೆ ಎಂಬ ನಂಬಿಕೆಯನ್ನು ನಿನ್ನಲ್ಲಿ ಹುಟ್ಟಿಸುತ್ತದೆ. ಆದರೆ.. ನಿಜ ಹೇಳಬೇಕೆಂದರೆ ನೀನು ಭೂತದ ನೆನಪಿನಲ್ಲಿ ಭವಿಷ್ಯದ ಭಯದಲ್ಲಿ ನಿನ್ನ ಬದುಕನ್ನು ಕಳೆಯಬೇಡ. ನಿನ್ನ ವರ್ತಮಾನದಲ್ಲಿಯೇ ನಿನ್ನ ಬದುಕಿದೆ ಈ ಘಳಿಗೆ ಮಾತ್ರ ನಿನ್ನದು. ಮುಂದೆಂದೂ ಸಿಗಬಹುದಾದ ಸುಖಕ್ಕೆ ನಿನ್ನ ಈ ದಿನವನ್ನು ಕಳೆದುಕೊಳ್ಳಬೇಡ. ನಿನ್ನ ಬದುಕಿನ ಪೆಟ್ಟಿಗೆಯನ್ನು ಅತ್ಯುತ್ತಮ ನೆನಪುಗಳೊಂದಿಗೆ ತುಂಬು ಉಸಿರುಗಟ್ಟುವಂತೆ ಓಡುವುದು ಖಂಡಿತ ಬೇಡ. ದೀರ್ಘವಾದ ಉಸಿರನ್ನು ನಿನ್ನ ಎದೆಯಾಳದಲ್ಲಿ ತುಂಬಿಕೊಂಡು ಅದನ್ನು ನಿಧಾನವಾಗಿ ಹೊರ ಹಾಕುತ್ತಾ ಜೀವನದ ಪ್ರತಿಯೊಂದು ಗಳಿಗೆಯನ್ನು ನಿನ್ನದಾಗಿಸಿಕೋ ಅದರ ಮಧುರವಾದ ಸವಿಯನ್ನು ಆಸ್ವಾದಿಸು ಆಗ ಬದುಕು ನಿನಗೆ ಸದಾ ಸುಂದರವಾಗಿ ಕಾಣುತ್ತದೆ ಎಂದು ಅಜ್ಜ ಹೇಳಿದ.
ಅಜ್ಜನ ಕೈಯಲ್ಲಿನ ಪೆಟ್ಟಿಗೆ ಇದೀಗ ಶಾಮನ ಕೈಗೆ ಹಸ್ತಾಂತರವಾಗಿದ್ದು ಇದೀಗ ಆತನ ಕಣ್ಣಿಗೆ ಅದು ಖಾಲಿ ಪೆಟ್ಟಿಗೆಯಾಗಿ ತೋರಲಿಲ್ಲ... ಅದು ನನಗಿರುವ ಬದುಕಿನ ಅವಕಾಶಗಳನ್ನು ತೋರುವ ಜಾದು ಪೆಟ್ಟಿಗೆಯಾಗಿ ಕಾಣಿಸಿತು.

ನೋಡಿದಿರಾ ಸ್ನೇಹಿತರೆ ! ಈ ಕಥೆಯಿಂದ ನಮಗೆ ಅರಿವಾಗುವುದು ನಮ್ಮ ಬದುಕಿನಲ್ಲಿ ನಾವು ಬೆಲೆ ಕೊಡಬೇಕಾಗಿರುವುದು ಅತ್ಯುತ್ತಮ ವಸ್ತುಗಳಿಗೆ ಅಲ್ಲ... ವ್ಯಕ್ತಿಗಳಿಗೆ ಮತ್ತು ವ್ಯಕ್ತಿಗತ ಭಾವನೆಗಳಿಗೆ. ಬದುಕಿನ ಅದೆಷ್ಟೋ ಸಮಯವನ್ನು ನಾವು ಭೂತದ ಕನವ-ರಿಕೆಯಲ್ಲಿ ಇಲ್ಲವೇ ಭವಿಷ್ಯದ ಚಿಂತೆಯಲ್ಲಿ ಕಳೆಯುತ್ತೇವೆ... ಈ ದಿನವನ್ನು ಜೀವಿಸಲು ಮರೆತುಬಿಡುತ್ತೇವೆ. ಎಲ್ಲರಿಗೂ ಇರುವಂತೆ ನಮಗೂ ಕೂಡ ದಿನಕ್ಕೆ 24 ಗಂಟೆಗಳು ಮಾತ್ರವೇ ಇರುತ್ತವೆ. ಶ್ರೀಮಂತನಾಗಿದ್ದ ಮಾತ್ರಕ್ಕೆ ಸಂತೋಷವಾಗಿರಲು ಸಾಧ್ಯವಿಲ್ಲ, ಎಲ್ಲಾ ಐಷಾರಾಮಗಳನ್ನು ಹೊಂದಿದ್ದವರು ಮಾತ್ರ ನೆಮ್ಮದಿಯ ನಿದ್ರೆಯನ್ನು ಮಾಡಲು ಸಾಧ್ಯವಿಲ್ಲ. ಸುಂದರವಾದ ಬದುಕನ್ನು ಸಾಗಿಸಲು ನಾವು ಮಹತ್ತರವಾದದನ್ನು ಸಾಧಿಸಬೇಕಾಗಿಲ್ಲ... ಕೇವಲ ವರ್ತಮಾನದಲ್ಲಿ ಜೀವಿಸುವುದನ್ನು ರೂಢಿಸಿಕೊಳ್ಳಬೇಕು. ಅತ್ಯಂತ ಸರಳವಾದ ಆಹಾರ ವಿಹಾರವನ್ನು ನಮ್ಮದಾಗಿಸಿಕೊಳ್ಳಬೇಕು. ಒಬ್ಬನೇ ಕುಳಿತು ಐಷಾರಾಮಿ ಹೋಟೆಲ್ ನಲ್ಲಿ ಭೂರೀ ಭೋಜನ ಸವಿಯುವುದು ಮನುಷ್ಯನಿಗೆ ಬೇಕಾಗಿಲ್ಲ.... ಬದಲಾಗಿ ನಿಮ್ಮನ್ನು ಅರ್ಥ ಮಾಡಿಕೊಂಡ ನಿಮ್ಮ ಕುಟುಂಬದ ಸದಸ್ಯರೊಂದಿಗೆ ಹಾಗೂ ಸ್ನೇಹಿತರೊಂದಿಗೆ ಸರಳವಾದ ಊಟ ಮಾಡಿದರೆ ಸಾಕು. ನಿಮ್ಮನ್ನು ಒತ್ತಡಕ್ಕೆ ಈಡು ಮಾಡುವ ಓಟದ ಸ್ಪರ್ಧೆಗಿಂತ ಸ್ನೇಹಿತರೊಂದಿಗೆ ಒಂದು ಪುಟ್ಟ ನಡಿಗೆ ಮನಸ್ಸಿಗೆ ನೆಮ್ಮದಿಯನ್ನು ತಂದುಕೊಡಬಲ್ಲದು. ಸಂತೋಷ ಎನ್ನುವುದು ನೀವು ಅಂತಿಮವಾಗಿ ತಲುಪುವ ಗು-ರಿಯಲ್ಲ... ಅದು ನೀವು ನಡೆಯುವ ಹಾದಿಯಲ್ಲಿ ಕಂಡು ಬರುವ ಎಲ್ಲಾ ಚಿಕ್ಕ ಪುಟ್ಟ ವಿಷಯಗಳನ್ನು ಆಸ್ವಾದಿಸುತ್ತಾ ಮುಂದೆ ಸಾಗುವ ಮನಸ್ಥಿತಿ. ನಿಮ್ಮ ಆಯ್ಕೆಯ ಹೆದ್ದಾರಿ ನಿಮ್ಮದಾಗಲಿ...ಏನಂತೀರಾ?



ವೀಣಾ ಹೇಮಂತ್
ಗೌಡ ಪಾಟೀಲ್

